# ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 103 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 01-11-2023 ಬುಧವಾರ ಪುಟ: 4 ಬೆಲೆ : ರೂ.2-00
Volume - 01 Issue - 103 Title- Code: KARKAN 28269 Chitradurga Date: 01-11-2023 Wednesday Page: 4 Price: Rs. 2-00



ಒಳಪುಟದ ಸುದ್ದಿಗಳು

ದೇವರ ಎತ್ತುಗಳಿಗೆ ಮೇವು ಸರಬರಾಜು ಮಾಡಲು ಸರ್ಕಾರ ವಿಫಲ: ಸ್ವಾಮೀಜಿ ಕಿಡಿ 2

ಚನ್ನಗಿರಿ ಬಿಸಿಎಂ ಅಧಿಕಾರಿ ರವಿಕುಮಾರ್ ಅಥರ್‌ಗೆ ಅಂತಾರಾಷ್ಟ್ರೀಯ ಪ್ರಶಸ್ತಿ ಗೌರವ 3

ಕನ್ನಡ ರಾಜ್ಯೋತ್ಸವ: ವಿಜೃಂಭಣೆ ಆಚರಣೆಗೆ ಸಕಲ ಸಿದ್ಧತೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಜೀವಮಾನ ಸಾಧನೆ ಪ್ರಶಸ್ತಿಗಾಗಿ ಅರ್ಜಿ

» ಚಿತ್ರದುರ್ಗ

ರಾಜ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2022ನೇ ಸಾಲಿನಲ್ಲಿ ಕ್ರೀಡಾ ಕ್ಷೇತ್ರದಲ್ಲಿ ಕ್ರೀಡಾಪಟುವಾಗಿ, ತರಬೇತುದಾರರಾಗಿ ನಿರಂತರ ಸೇವೆ ಸಲ್ಲಿಸಿ ಸಾಧನೆ ಮಾಡಿದಂತಹ ಹಿರಿಯ ಕ್ರೀಡಾಪಟು, ತರಬೇತುದಾರರಿಗೆ ಜೀವನ ಪರ್ಯಂತ ಸಾಧನಾ ಪ್ರಶಸ್ತಿ ನೀಡಲು ಹಾಗೂ ಗ್ರಾಮೀಣ ಕ್ರೀಡೆಗಳಲ್ಲಿ ವಿಶೇಷ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 30 ಅರ್ಜಿ ಸಲ್ಲಿಸಲು ಕೊನೆ ದಿನ. ರಾಷ್ಟ್ರೀಯ, ಅಂತರಾಷ್ಟ್ರೀಯ ಜೀವಮಾನ ಸಾಧನೆ ಮಾಡಿದ ಹಾಗೂ ಅತ್ಯುತ್ತಮ ಸಾಧನೆ ಮಾಡಿರುವ ಕ್ರೀಡಾಪಟುಗಳು ಪ್ರಶಸ್ತಿಗಳಿಗೆ ಅರ್ಜಿ ಸಲ್ಲಿಸುವ ಕ್ರೀಡಾಪಟುಗಳು, ತರಬೇತುದಾರರು ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ ಮತ್ತು ಜೀವಮಾನ ಸಾಧನೆ ಪ್ರಶಸ್ತಿಗೆ ಅರ್ಜಿ ಸಲ್ಲಿಸುವವರು ಇಲಾಖಾ ವೆಬ್‌ಸೈಟ್ http://sevasindhuservicse.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನವೋದಯ ವಿದ್ಯಾಲಯ: ಅರ್ಜಿ ಅವಧಿ ವಿಸ್ತರಣೆ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ್ ನವೋದಯ ವಿದ್ಯಾಲಯದಲ್ಲಿ 2024–25ನೇ ಸಾಲಿಗೆ 9 ಮತ್ತು 11ನೇ ತರಗತಿಗೆ ಪ್ರವೇಶ ಪಡೆಯಲು ಜಿಲ್ಲೆಯ ಎಲ್ಲಾ ಸರ್ಕಾರಿ ಹಾಗೂ ಮಾನ್ಯತೆ ಪಡೆದ ಶಾಲೆಗಳ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ನವೆಂಬರ್ 7 ರವರೆಗೆ ವಿಸ್ತರಿಸಲಾಗಿದೆ. https://cbseitms.nic.in/2023/nvsix/PrincipalLogin/getafflictionno ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಚಿತ್ರದುರ್ಗ ಜಿಲ್ಲೆಯ ಖಾಯಂ ನಿವಾಸಿಯಾಗಿರಬೇಕು. ಮತ್ತು ಚಿತ್ರದುರ್ಗ ಜಿಲ್ಲೆಯಲ್ಲಿರುವ ಸರ್ಕಾರ, ಸರ್ಕಾರದಿಂದ ಮಾನ್ಯತೆ ಪಡೆದ ಶಾಲೆಯಲ್ಲಿ 2023–24ರ ಶೈಕ್ಷಣಿಕ ಅವಧಿಯಲ್ಲಿ 8 ಮತ್ತು 10ನೇ ತರಗತಿಯಲ್ಲಿ ಓದುತ್ತಿರುವ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

9ನೇ ತರಗತಿಗೆ ಅರ್ಜಿ ಸಲ್ಲಿಸಲು 2009 ಮೇ 5 ರಿಂದ 2011ರ ಜುಲೈ 31 ರ ನಡುವೆ ಜನಿಸಿರಬೇಕು. 11ನೇ ತರಗತಿಗೆ ಅರ್ಜಿ ಸಲ್ಲಿಸಲು 2007ರ ಜೂನ್ 1 ರಿಂದ 2009ರ ಜುಲೈ 31 ರ ನಡುವೆ ಜನಿಸಿರಬೇಕು. ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಆಯ್ಕೆ ಪರೀಕ್ಷೆಯು 2024ರ ಫೆಬ್ರವರಿ 10 ರಂದು ನಡೆಯಲಿದೆ.

8 ನೇ ತರಗತಿ ವಿದ್ಯಾರ್ಥಿಗಳಿಗೆ ಆಯ್ಕೆ ಪರೀಕ್ಷೆ: ಹಿಂದಿ, ಇಂಗ್ಲಿಷ್, ಗಣಿತ ಮತ್ತು ವಿಜ್ಞಾನ ಓಎಂಆರ್ ಆಧಾರಿತ ವಸ್ತುನಿಷ್ಠ ಪ್ರಕಾರ ದ್ವಿಭಾಷಾ ಪತ್ರಿಕೆ (ಹಿಂದಿ ಮತ್ತು ಇಂಗ್ಲಿಷ್) ಪಠ್ಯಕ್ರಮ ಮತ್ತು ಆಯ್ಕೆಯ ಮಾನದಂಡಗಳಿಗಾಗಿ ಎನ್‌ವಿಎಸ್ ಅಧಿಸೂಚನೆಯನ್ನು ನೋಡಬಹುದು. 10ನೇ ತರಗತಿ ಅಧ್ಯಯನದ ಜಿಲ್ಲೆ ಮತ್ತು ನಿವಾಸ ಒಂದೇ ಆಗಿದ್ದರೆ ಮಾತ್ರ ಅಭ್ಯರ್ಥಿಯನ್ನು ಜಿಲ್ಲಾ ಮಟ್ಟದ ಮೆರಿಟ್‌ಗೆ ಪರಿಗಣಿಸಲಾಗುತ್ತದೆ ಎಂದು ಪ್ರಾಚಾರ್ಯರು ತಿಳಿಸಿದ್ದಾರೆ.

### ಕರ್ನಾಟಕ ಸಂಭ್ರಮ- 50 ಗಾಜಿನ ಮನೆಯಲ್ಲಿ ಸಾಂಸ್ಕೃತಿಕ ಸಂಭ್ರಮ

» ದಾವಣಗೆರೆ

ರಾಜ್ಯಕ್ಕೆ ಕರ್ನಾಟಕ ಎಂದು ಮರು ನಾಮಕರಣಗೊಂಡು ನವೆಂಬರ್ 1 ಕ್ಕೆ 50 ವರ್ಷ ಪೂರ್ಣಗೊಳ್ಳುತ್ತಿರುವ ಹನ್ನಲೆಯಲ್ಲಿ ಸರ್ಕಾರವು ಕರ್ನಾಟಕ ಸಂಭ್ರಮ–50 ರ ಅಂಗವಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಜಿಲ್ಲಾಡಳಿತ ದಾವಣಗೆರೆ ಗಾಜಿನ ಮನೆಯಲ್ಲಿ ನವಂಬರ್ ತಿಂಗಳಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಿದೆ ಎಂದು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಗಾಜಿನ ಮನೆಯಲ್ಲಿ ಸಂಜೆ 6 ಗಂಟೆಯಿಂದ ಕಾರ್ಯಕ್ರಮಗಳು ನಡೆಯಲಿದ್ದು ನವಂಬರ್ 1, 4, 5, 11, 19 ಹಾಗೂ 26 ರಂದು ಸಾಂಸ್ಕೃತಿಕ ಸಂಜೆ ಕಾರ್ಯಕ್ರಮಗಳು ಜರುಗಲಿವೆ. ಜಾನಪದ ಜಾದೂ, ಸಂಗೀತ, ನೃತ್ಯ ಕಾರ್ಯಕ್ರಮಗಳು ಜರುಗಲಿವೆ. ಸಾರ್ವಜನಿಕರು, ಶಾಲಾ, ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ.

# ರಾಜ್ಯೋತ್ಸವ ಪ್ರಶಸ್ತಿಗೆ 68 ಮಂದಿ ಆಯ್ಕೆ



» ಬೆಂಗಳೂರು

ಕನ್ನಡ ರಾಜ್ಯೋತ್ಸವ ಪ್ರಶಸ್ತಿ ವಿಜೇತರ ಪಟ್ಟಿಯನ್ನು ಸರ್ಕಾರ ಬಿಡುಗಡೆ ಮಾಡಿದೆ.ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಗಣ್ಯ ವ್ಯಕ್ತಿಗಳಿಗೆ ಹಾಗೂ ಸಂಸ್ಥೆಗಳಿಗೆ ಪ್ರತಿವರ್ಷ ಸರಕಾರದಿಂದ ನೀಡುವ ರಾಜ್ಯೋತ್ಸವ ಪ್ರಶಸ್ತಿಯ 2023ರ ಸಾಲಿನ 68 ವಿಜೇತರ ಅಂತಿಮ ಪಟ್ಟಿಯನ್ನು ಮಂಗಳವಾರ ಬಿಡುಗಡೆ ಮಾಡಿದೆ.

ಈ ಬಾರಿ ಜಾನಪದ ಕ್ಷೇತ್ರದಲ್ಲಿ 9 ಮಂದಿಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಘೋಷಣೆ ಮಾಡಲಾಗಿದೆ. ಕನ್ನಡ & ಸಂಸ್ಕೃತಿ ಇಲಾಖೆಯ ಸಚಿವ ಶಿವರಾಜ ತಂಗಡಗಿ ಇಂದು ಈ ಬಾರಿಯ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಆಯ್ಕೆಯಾಗಿರುವ ಪುರಸ್ಕೃತರ ಹೆಸರುಗಳನ್ನು ಘೋಷಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿ, 10 ಸಂಘ ಸಂಸ್ಥೆಗಳೂ ಒಳಗೊಂಡಂತೆ 68 ಮಂದಿಗೆ ಪ್ರಶಸ್ತಿ ಘೋಷಿಸಲಾಗಿದೆ. ಈ ಪೈಕಿ 10 ವರ್ಷ ದಾಟಿದ ಇಬ್ಬರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದು, ಬೀದರ್ ಮೂಲದ ಮಂಗಳಮುಖಿಯೊಬ್ಬರೂ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿಗಳನ್ನು ಸಿಎಂ ಸಿದ್ದರಾಮಯ್ಯ ವಿತರಣೆ ಮಾಡಲಿದ್ದಾರೆಂದು ಸ್ಪಷ್ಟಪಡಿಸಿದ್ದಾರೆ.

### 2023ರ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪಡೆದವರ ಪಟ್ಟಿ

**ಚಲನಚಿತ್ರ ಕ್ಷೇತ್ರ**
- ಡಿಂಗ್ರಿ ನಾಗರಾಜ್,
- ಬಿ. ಜನಾರ್ಧನ್ (ಬ್ಯಾಂಕ್ ಜನಾರ್ಧನ್)

**ರಂಗಭೂಮಿ ಕ್ಷೇತ್ರ,**
- ಎ.ಜಿ.ಚಿದಂಬರ ರಾವ್ ಜಂಬೆ
- ಪಿ. ಗಂಗಾಧರ ಸ್ವಾಮಿ
- ಹೆಚ್.ಬಿ.ಸರೋಜಮ್ಮ
- ತಯ್ಯಬಖಾನ್ ಎಂ.ಇನಾಮದಾರ
- ವಿಶ್ವನಾಥ್ ವಂಶಾಕೃತ ಮಠ
- ಪಿ.ತಿಪ್ಪೇಸ್ವಾಮಿ

**ಸಂಗೀತ ಕ್ಷೇತ್ರ;**
- ಡಾ.ನಯನ ಎಸ್.ಮೋರೆ
- ಲೀಲಾ ಎಂ ಕೊಡ್ಲಿ
- ಶಬ್ಬೀರ್ ಅಹಮದ್
- ಡಾ.ಎಸ್ ಬಾಳೇಶ ಭಜಂತ್ರಿ

**ಶಿಲ್ಪಕಲೆ ಮತ್ತು ಚಿತ್ರಕಲೆ**
- ಟಿ.ಶಿವಶಂಕರ್
- ಕಾಳಪ್ಪ ವಿಶ್ವಕರ್ಮ
- ಮಾರ್ಥಾ ಜಾಕಿಮೋವಿಚ್
- ಪಿ.ಗೌರಯ್ಯ

**ಯಕ್ಷಗಾನ,ಬಯಲಾಟ**
- ಮೋಹನದಾಸ ಶೆಣೈ
- ಕೆ.ಲೀಲಾವತಿ ಬೈಪಾಡಿತ್ತಾಯ
- ಕೇಶಪ್ಪ ಶಿಳ್ಳಿಕ್ಯಾತರ
- ದಳವಾಯಿ ಸಿದ್ದಪ್ಪ

**ಜಾನಪದ ಕ್ಷೇತ್ರ:**
- ಹುಸೇನಾಬಿ ಬುಡೆನ್ ಸಾಬ್
- ಶಿವಂಗಿ ಶಣ್ಮರಿ
- ಮಹದೇವು
- ನರಸಪ್ಪಾ
- ಶಕುಂತಲಾ
- ಚೌಡಮ್ಮ
- ಹೆಚ್.ಕೆ.ಕಾರಮಂಚಪ್ಪ
- ವಿಭೂತಿ ಗುಂಡಪ್ಪ

**ಸಮಾಜಸೇವೆ ಕ್ಷೇತ್ರ:**
- ಹುಚ್ಚಮ್ಮ ಬಸಪ್ಪ ಚೌದ್ರಿ
- ಚಾರ್ಮಾಡಿ ಹಸನಬ್ಬ
- ಕೆ.ರೂಪಾ ನಾಯಕ್
- ನಿಜಗುಣಾನಂದ ಸ್ವಾಮೀಜಿ
- ಜಿ.ನಾಗರಾಜು

**ಆಡಳಿತ ಕ್ಷೇತ್ರ:**
- ಜಿ.ವಿ.ಬಲರಾಮ್

**ವೈದ್ಯಕೀಯ ಕ್ಷೇತ್ರ**
- ಡಾ.ಜಿ.ರಾಮಚಂದ್ರ
- ಡಾ. ಪ್ರಶಾಂತ್ ಶೆಟ್ಟಿ

**ಸಾಹಿತ್ಯ ಕ್ಷೇತ್ರ:**
- ಪ್ರೊ. ಸಿ. ನಾಗಣ್ಣ
- ಹೆಚ್.ಕೆ. ಸುಬ್ಬಯ್ಯ
- ಸತೀಶ್ ಕುಲಕರ್ಣಿ
- ಲಕ್ಷ್ಮೀಪತಿ ಕೋಲಾರ
- ಪರಪ್ಪ ಗುರುಪಾದಪ್ಪ
- ಡಾ. ಕೆ.ಷರೀಫಾ

**ಶಿಕ್ಷಣ ಕ್ಷೇತ್ರ**
- ರಾಮಪ್ಪ ಹವಳೆ
- ಕೆ. ಚಂದ್ರಶೇಖರ್
- ಕೆ.ಟಿ. ಚಂದ್ರು

**ಕ್ರೀಡಾ ಕ್ಷೇತ್ರ**
- ಟಿ.ಎಸ್. ದಿವ್ಯಾ
- ಅದಿತಿ ಅಶೋಕ್
- ಅಶೋಕ್ ಗದಿಗೆಪ್ಪ
- ನ್ಯಾಯಂಗ ಕ್ಷೇತ್ರ
- ಜಿ.ವಿ.ಗೋಪಾಲಗೌಡ

**ಕೃಷಿ–ಪರಿಸರ ಕ್ಷೇತ್ರ:**
- ಸೋಮನಾಥರೆಡ್ಡಿ ಪೂರ್ಮಾ
- ದ್ಯಾವನಗೌಡ ಟಿ.ಪಾಟೀಲ
- ಶಿವರೆಡ್ಡಿ ಹನುಮರೆಡ್ಡಿ ವಾಸನ

**ಸಂಕೀರ್ಣ ಕ್ಷೇತ್ರ**
- ಎ.ಎಂ.ಮದರಿ
- ಹಾಜಿ ಅಬ್ದುಲ್ಲಾ ಪರ್ಕಳ
- ಮಿಮಿಕ್ರಿ ದಯಾನಂದ್
- ಡಾ.ಕಬ್ಬಿನಾಲೆ ವಸಂತ ಭರದ್ವಾಜ್

## ಜಿಲ್ಲಾ ಕನ್ನಡ ರಾಜ್ಯೋತ್ಸವ: 28 ಸಾಧಕರಿಗೆ ಸನ್ಮಾನ

» ಚಿತ್ರದುರ್ಗ

ಕನ್ನಡ ರಾಜ್ಯೋತ್ಸವ ಅಂಗವಾಗಿ ಜಿಲ್ಲಾಡಳಿತದ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವವರನ್ನು ನ. 01 ರಂದು ಜಿಲ್ಲಾ ಕೇಂದ್ರದಲ್ಲಿ ಜರುಗುವ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಸನ್ಮಾನಿಸಲು 28 ಜನ ಸಾಧಕರನ್ನು ಆಯ್ಕೆಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ತಿಳಿಸಿದ್ದಾರೆ. ಉಪವಿಭಾಗಾಧಿಕಾರಿ ಕಾರ್ತಿಕ್ ಅವರ ಅಧ್ಯಕ್ಷತೆಯ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಆಯ್ಕೆ ಸಮಿತಿಯು ಅ. 30 ರಂದು ಸಭೆ ನಡೆಸಿ, ಸನ್ಮಾನಿತರ ಪಟ್ಟಿಯನ್ನು ಶಿಫಾರಸು ಮಾಡಿ ಸಲ್ಲಿಸಿರುತ್ತದೆ. ಸನ್ಮಾನಿಸಲಾಗುವವರ ವಿವರ ಇಂತಿದೆ. ವರ್ಷ, ಆದಿವಾಲ, ಹಿರಿಯೂರು ತಾಲ್ಲೂಕು– ಕ್ರೀಡಾ ಕ್ಷೇತ್ರ (ವಿಶೇಷ ಚೇತನರು). ಶ್ರೇಯ ಬಿನ್ ಕೆ. ಕುಮಾರಸ್ವಾಮಿ, ಚಿತ್ರದುರ್ಗ– ಕ್ರೀಡೆ, ರವಿ ಅಂಬೇಕರ್ ಯೋಗ ತರಬೇತುದಾರರು, ಚಿತ್ರದುರ್ಗ–(ಕ್ರೀಡೆ). ಡಾ. ಆರ್.ಎ. ದಯಾನಂದಮೂರ್ತಿ, ಚಳ್ಳಕೆರೆ– ಕೃಷಿ. ಕೆ.ಸಿ. ಹೊರಕೇರಪ್ಪ, ಹಿರಿಯೂರು– ಕೃಷಿ. ಮೋಹನ ಮುರಳಿ, ಚಿತ್ರದುರ್ಗ– ಚಿತ್ರಕಲೆ. ಟಿ.ಎಂ. ವೀರೇಶ್, ಚಿತ್ರದುರ್ಗ– ಚಿತ್ರಕಲೆ. ಜಿ.








ಪರಶುರಾಮ, ಚಿತ್ರದುರ್ಗ– ಭೂವಿಜ್ಞಾನಿ. ಡಾ. ದೀಪಕ್ ಆರ್.ಎಸ್., ಚಿತ್ರದುರ್ಗ– ಸಂಶೋಧನೆ. ಡಾ. ಪಿ.ವಿ. ಶ್ರೀಧರ ಮೂರ್ತಿ, ಚಿತ್ರದುರ್ಗ– ವೈದ್ಯಕೀಯ. ಡಾ. ಬಿ. ಚಂದ್ರನಾಯ್ಕ್, ನವಜಾತ ಶಿಶು ಮತ್ತು ಮಕ್ಕಳ ತಜ್ಞರು, ಚಿತ್ರದುರ್ಗ– ವೈದ್ಯಕೀಯ. ಹನುಮಂತಪ್ಪ, ಹೊಸದುರ್ಗ– ಶಿಕ್ಷಣ. ಜಿ.ಎಸ್. ವಸಂತ, ಮೊಳಕಾಲ್ಮೂರು ತಾಲ್ಲೂಕು– ಶಿಕ್ಷಣ. ಡಾ. ಸ್ವಾಮ್ಯ, ಕೆಳಗೋಟೆ– ಸಮಾಜಸೇವೆ. ವೀಣಾ ಗೌರಣ್ಣ, ಚಿತ್ರದುರ್ಗ– ಸಮಾಜ ಸೇವೆ. ಪ್ರೊ. ಜಿ. ಪರಮೇಶ್ವರಪ್ಪ, ಚಿತ್ರದುರ್ಗ– ಸಾಹಿತ್ಯ. ಬಾಗೂರು ಆರ್. ನಾಗರಾಜಪ್ಪ, ಹೊಸದುರ್ಗ ತಾಲ್ಲೂಕು– ಸಾಹಿತ್ಯ. ಎಸ್.ಡಿ. ರಾಮಸ್ವಾಮಿ, ಚಿತ್ರದುರ್ಗ– ರಂಗಭೂಮಿ. ಡಿ. ಶ್ರೀಕುಮಾರ್, ಚಿತ್ರದುರ್ಗ– ರಂಗಭೂಮಿ. ಶೈಲಜ ಸುದರ್ಶನ್, ಚಿತ್ರದುರ್ಗ– ಸಂಗೀತ. ಡಿ.ಓ. ಮುರಾರ್ಜಿ, ಚಿಕ್ಕೋಬನಹಳ್ಳಿ– ಸಂಗೀತ. ಜಿ. ರಾಜಣ್ಣ, ಚಿತ್ರದುರ್ಗ– ಜಾನಪದ. ಶ್ರೀನಿವಾಸ, ಚಿಕ್ಕುಂತಿ, ಮೊಳಕಾಲ್ಮೂರು ತಾಲ್ಲೂಕು– ಜಾನಪದ. ಲಕ್ಷ್ಮಣ ಹೆಚ್., ವರದಿಗಾರರು, ಕ್ರಾಂತಿದೀಪ ಕನ್ನಡ ದಿನಪತ್ರಿಕೆ, ಚಿತ್ರದುರ್ಗ– ಪತ್ರಿಕೋದ್ಯಮ, ರವಿ ಮಲ್ಲಾಪುರ, ಸಂಪಾದಕರು, ನಳಂದ ಕನ್ನಡ ದಿನಪತ್ರಿಕೆ, ಚಿತ್ರದುರ್ಗ– ಪತ್ರಿಕೋದ್ಯಮ, ವೀರೇಶ್ ವಿ., ವರದಿಗಾರರು, ರಿಪಬ್ಲಿಕ್ ಟಿ.ವಿ., ಕನ್ನಡ, ಚಿತ್ರದುರ್ಗ– ಪತ್ರಿಕೋದ್ಯಮ, ಮಂಜುನಾಥ್ ಟಿ.ವಿ.–9 ಕ್ಯಾಮೆರಾಮನ್, ಚಿತ್ರದುರ್ಗ– ಛಾಯಾಗ್ರಹಣ. ದ್ವಾರಕನಾಥ್, ಕನ್ನಡಪ್ರಭ ಫೋಟೋಗ್ರಾಫರ್, ಚಿತ್ರದುರ್ಗ– ಛಾಯಾಗ್ರಹಣ.

## ಡಾ.ಸೌಮ್ಯ ಮಂಜುನಾಥ ಸ್ವಾಮಿಗೆ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ

**ಚಿತ್ರದುರ್ಗ:** ಡಾ. ಸೌಮ್ಯ ಮಂಜುನಾಥ ಸ್ವಾಮಿ,ಕೆ ಇವರು ಚಿತ್ರದುರ್ಗ ನಗರದ ಕೆಳಗೋಟೆಯವರಾಗಿದ್ದಾರೆ. ಕುವೆಂಪು ವಿಶ್ವವಿದ್ಯಾಲಯದ



ಅರ್ಥಶಾಸ್ತ್ರ ವಿಭಾಗದಲ್ಲಿ ಪಿ.ಹೆಚ್.ಡಿ ಪದವಿಯನ್ನು ಪಡೆದಿರುತ್ತಾರೆ. ಹಾಗೂ ಸಂಜೀವಿನಿ ಜೀವ ರಕ್ಷಕ ಟ್ರಸ್ಟ್ (ರಿ) ಎಂಬ ಸಂಸ್ಥೆಯ ಸಂಸ್ಥಾಪಕ ಪ್ರಧಾನ ಕಾರ್ಯದರ್ಶಿಯಾಗಿ ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಮೂಡಿಸುವ ಕೆಲಸವನ್ನು ಸುಮಾರು 8 ವರ್ಷಗಳಿಂದ ಸೇವೆ ಸಲ್ಲಿಸುತ್ತಾ ಬಂದಿರುತ್ತಾರೆ. ರಸ್ತೆ ಅಪಘಾತಗಳ ಕುರಿತು ಅರಿವು ಮೂಡಿಸವಂತ ಕೆಲಸವನ್ನು ನಿರಂತರವಾಗಿ ಮಾಡುತ್ತಿದ್ದಾರೆ. ಹಳ್ಳಿ ಹಳ್ಳಿಗಳಲ್ಲಿ ಶಾಲಾ ಕಾಲೇಜುಗಳಲ್ಲಿ ಸಹ ನೂರಾರು ರಸ್ತೆ ಸುರಕ್ಷಿತಾ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿ ಜನರಲ್ಲಿ ರಸ್ತೆ ಸುರಕ್ಷತಾ ಅರಿವು ಮೂಡಿಸುವ ಕೆಲಸ ಮಾಡುತ್ತಿದ್ದಾರೆ. ಜೊತೆಗೆ ಸಿ.ಪಿ.ಆರ್ ಪ್ರಥಮ ಚಿಕಿತ್ಸೆಯ ಬಗ್ಗೆ 5,000 ವಿದ್ಯಾರ್ಥಿಗಳಿಗೆ ಇದರ ಬಗ್ಗೆ ತಿಳಿಸಿ ಹೃದಯಾಘಾತ ಸಂಭವಿಸಿದಾಗ ನೆರವಿಗೆ ದಾವಿಸುವಂತೆ ಪ್ರೇರೆಪಿಸಿದ್ದು, ಇನ್ನು ಮುಂತಾದ ಜೀವ ಉಳಿಸುವ ಕೆಲಸದಲ್ಲಿ ತೊಡಗಿಕೊಂಡಿದ್ದಾರೆ. ಇವರು ರಸ್ತೆ ಸುರಕ್ಷತಾ ಸ್ವಯಂ ಸೇವಕಿಯಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಕಂಡು ಜಿಲ್ಲಾ ಪೊಲೀಸ್ ಇಲಾಖೆಯು ಪ್ರಮಾಣ ಪತ್ರದೊಂದಿಗೆ ಅಭಿನಂದಿಸಿದೆ. ಈಗ ಜಿಲ್ಲಾಡಳಿತ ಇವರ ಸೇವೆಯನ್ನು ಪರಿಗಣಿಸಿ ಜಿಲ್ಲಾಮಟ್ಟದ ಕನ್ನಡ ರಾಜ್ಯೋತ್ಸವ ಪ್ರಶಸ್ತಿಯನ್ನು ನೀಡಿ ಗೌರವಿಸುವ ಮೂಲಕ ಮತ್ತಷ್ಟು ಕೆಲಸ ಮಾಡಲು ಪ್ರೋತ್ಸಾಹ ನೀಡುವ ಕೆಲಸ ಜಿಲ್ಲಾಡಳಿತ ಮಾಡಿದೆ.

**ಪ್ರಮುಖ ಸುದ್ದಿ**

# ಕೋಟೆನಾಡಿನ ಪಿ.ತಿಪ್ಪೇಸ್ವಾಮಿಗೆ ರಾಜ್ಯೋತ್ಸವ ಪ್ರಶಸ್ತಿ

» ಚಿತ್ರದುರ್ಗ

ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವ ಆಚರಣೆಹಿನ್ನೆಲೆಯಲ್ಲಿರಾಜ್ಯಸರ್ಕಾರದಿಂದ ನೀಡುವ 2023ರ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಕೋಟೆನಾಡು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆಯ ಪಿ.ತಿಪ್ಪೇಸ್ವಾಮಿ ಆಯ್ಕೆಯಾಗಿದ್ದಾರೆ. ರಂಗಭೂಮಿ ಕ್ಷೇತ್ರದಲ್ಲಿ ಗುರುತಿಸಿಕೊಂಡಿರುವ ಪಿ. ತಿಪ್ಪೇಸ್ವಾಮಿಗೆ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ.

ದಿವಂಗತ ವೀರಣ್ಣ–ವೀರಮ್ಮನವರ ಏಕೈಕ ಪುತ್ರನಾಗಿ ಚಳ್ಳಕೆರೆಯಲ್ಲಿ ಜನನ 1946 ರಲ್ಲಿ ಜನಿಸಿದರು. ಬಾಲ್ಯದಿಂದಲೂ ನಾಟಕ–ಸಂಗೀತದತ್ತ ಒಲವು. ಬಿ.ಎ. ಪದವಿಯ ನಂತರ ಬಿ.ಇಡಿ. ಶಿಕ್ಷಣವನ್ನು ಪೂರೈಸಿ ಚಳ್ಳಕೆರೆಯ ಕಾಟಪ್ಪನಹಟ್ಟಿಯಲ್ಲಿನ ಕಾಟಂಲಿಂಗೇಶ್ವರ ಪ್ರೌಢಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ 1973 ರಿಂದ 2004 ರವರೆಗೆ ಸೇವೆ ಸಲ್ಲಿಸಿ ನಿವೃತ್ತರಾದರು.

ವೃತ್ತಿಯೊಂದಿಗೆ ಸಾಹಿತ್ಯ–ಸಂಗೀತಗಳ ಪ್ರವೃತ್ತಿಯೂ ಬೆಳೆಯಿತು. ನಾಟಕಗಳ ಗೀಳು ಹಾರ್ಮೋನಿಯಂ ಕಲಿಯುವಂತೆ ಮಾಡಿತು. ಅದು ಕ್ಯಾಸಿಯೋ ಕೀಬೋರ್ಡ್ ಹಂತದವರೆಗೂ ಬೆಳೆಸಿತು. 1975 ರಲ್ಲಿ ಕಾಟಂಲಿಂಗೇಶ್ವರ ನಾಟಕ ಸಂಘದ ಸ್ಥಾಪನೆ. ಇದು ಜಿಲ್ಲೆಯಾದ್ಯಂತ ನೂರಾರು ನಾಟಕಗಳ ಪ್ರದರ್ಶನ, ನಿರ್ದೇಶನಕ್ಕೆ ಕಾರಣವಾಯಿತು.

ಮರಡಿಹಳ್ಳಿ ಸೀತಾರಾಮರೆಡ್ಡಿ ವಿರಚಿತ 'ರಾಜಾವೀರ ಮದಕರಿನಾಯಕ' ನಾಟಕ ಇವರಿಗೆ ಖ್ಯಾತಿಯನ್ನು ತಂದುಕೊಟ್ಟಿದ್ದಲ್ಲದೇ, ನೂರಾರು ಪ್ರಯೋಗಗಳನ್ನು ಕಂಡಿತು. ಇದು ದೆಹಲಿಯಲ್ಲೂ ಪ್ರದರ್ಶನವಾಯಿತು. ತಮ್ಮ ಮ್ಯಾಸಬೇಡ ಬುಡಕಟ್ಟು ಸಮುದಾಯದ ಸಾಂಸ್ಕೃತಿಕ ವೀರರಾದ ಗಾದಿರಿ ಪಾಲನಾಯಕ ಮತ್ತು ಜಗಲೂರು ಪಾಪನಾಯಕ ನಾಟಕ ರಚನೆಗೆ ಅಗತ್ಯವಾದ ಮೂಲದ್ರವ್ಯವನ್ನು ಒದಗಿಸಿ ಕಾಲುವೇಹಳ್ಳಿ ಗಾದಿರಪ್ಪ ಎಂಬುವವರಿಂದ ನಾಟಕಗಳನ್ನುಬರೆಯಿಸುವಲ್ಲಿ,ಅವುಗಳನ್ನು ರಂಗಭೂಮಿಗೆ ತರುವಲ್ಲಿ, ಬುಡಕಟ್ಟು



ಸಮುದಾಯಕ್ಕೆ ಅವರ ಚರಿತ್ರೆಯನ್ನು ತಿಳಿಸುವಲ್ಲಿ ಇವರದು ಪ್ರಮುಖ ಪಾತ್ರ.

ಅಲ್ಲದೆ ಇವರು ತಮ್ಮ ಸಂಗೀತ ಮತ್ತು ನಿರ್ದೇಶನದ ಮೂಲಕ ಹವ್ಯಾಸಿ ಗ್ರಾಮೀಣ ರಂಗಭೂಮಿಯನ್ನು ರೂಪಿಸಿದ ಕೀರ್ತಿಗೆ ಭಾಜನರಾಗಿದ್ದಾರೆ. ರಕ್ತರಾತ್ರಿ, ಭಕ್ತಸುಧನ್ವ, ಕುರುಕ್ಷೇತ್ರ, ದೇವಿ ಮಹಾತ್ಮ, ದಾನಶೂರ ಕರ್ಣ, ವೀರಾಭಿಮನ್ಯು ಮುಂತಾದ ಪೌರಾಣಿಕ ನಾಟಕಗಳಲ್ಲದೇ, ಇಪ್ಪತ್ತೈದಕ್ಕೂ ಹೆಚ್ಚು ಸಾಮಾಜಿಕ ನಾಟಕಗಳನ್ನು ನಿರ್ದೇಶಿಸಿ, ಸಂಗೀತ ನೀಡಿದ್ದಾರೆ. ಹಗಲೆಲ್ಲಾ ಶಾಲೆಯಲ್ಲಿ ಶಿಕ್ಷಕ, ರಾತ್ರಿಯೆಲ್ಲಾ ಹಳ್ಳಿಯ ರಂಗಭೂಮಿಗಳಲ್ಲಿ ನಿರ್ದೇಶನ ಪಾತ್ರ, ಮೂರು ದಶಕಗಳಿಗೂ ಹೆಚ್ಚು ಕಾಲ ನಿರ್ವಹಿಸಿದವರು.ಇವರ ಗ್ರಾಮೀಣ ರಂಗಭೂಮಿಯ ಸೇವೆಯನ್ನು ಗುರುತಿಸಿ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ (2001) ನೀಡಿ ಗೌರವಿಸಿದೆ. ಹಾಗೂ ನಾಟಕ ಆಕಾಡೆಮಿಯ ಸದಸ್ಯತ್ವ (2014) ನೀಡಿ ರಂಗಕಲಾವಿದರ ಸೇವೆ ಮಾಡಲು, ಚಿತ್ರದುರ್ಗ ಜಿಲ್ಲೆಯಾದ್ಯಂತ ರಂಗಚಟುವಟಿಕೆಗಳು ಗರಿಗೆದರಲು ಅವಕಾಶಕಲ್ಪಿಸಿತ್ತು.ಎಪ್ಪತ್ತರಇಳಿವಯಸ್ಸಲ್ಲೂ ಬತ್ತದ ಅವರ ಉತ್ಸಾಹ ಜಾನಪದ ರಂಗಭೂಮಿಯ ಮುಮ್ಮೇಳಗಾರರ (ಭಾಗವತರ) ಸಂಘವನ್ನು ಕಟ್ಟಿ ಅವರಿಗೆ ನ್ಯಾಯಯುತವಾಗಿ ದಕ್ಕಬೇಕಾದ ಮಾಸಾಶನ ಹಾದಿ ಸವಲತ್ತುಗಳನ್ನು ಕೊಡಿಸಲು ಸಂಘಟಿತ ಹೋರಾಟ ನಡೆಸಿದ್ದಾರೆ. ಚಳ್ಳಕೆರೆ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಘಟಕದ ಅಧ್ಯಕ್ಷರಾಗಿ ಎರಡು ಅವಧಿಗೆ (2005–2007, 2008–2010) ಸೇವೆ. ಸಂಚಾಲಕರಗಿ ಜಿಲ್ಲಾ ಜಾನಪದ ಜಾತ್ರೆ (2005–2006), ಕಾಲೇಜು ರಂಗೋತ್ಸವ (2016–2017) ಗಳಲ್ಲಿ ಸೇವೆ.ಒಟ್ಟಾರೆಯಾಗಿ ಜಾನಪದ ರಂಗ ಚಟುವಟಿಕೆಗಳನ್ನು ಗುರುತಿಸಿ ಜಿಲ್ಲಾ ವಾಲ್ಮೀಕಿ ಪ್ರಶಸ್ತಿ (2015–16), ಯಾದಗಿರಿ ಜಿಲ್ಲೆಯಲ್ಲಿ ನಡೆದ ಜಾನಪದೋತ್ಸವದಲ್ಲಿ 'ಜಾನಪದ ಕಲಾಲೋಕ ಪ್ರಶಸ್ತಿ' (2017), 'ಸಿಜಿಕೆ ನಾಟಕೋತ್ಸವದಲ್ಲಿ ಸಿಜಿಕೆ ಪ್ರಶಸ್ತಿ' (2018) ಗಳ ಗೌರವ ಸಂದಿವೆ. ಪ್ರಸ್ತುತ ಮಹತ್ವಾಕಾಂಕ್ಷಿಯ ಕ್ಷೇತ್ರಕಾರ್ಯಾಧಾರಿತ ಕೃತಿ 'ಮ್ಯಾಸ ಬೇಡರ ಮೌಖಿಕ ಕಥನಗಳು' (2019) ಪ್ರಕಟ. ಈ ಕೃತಿಗೆ 2020 ನೇ ಸಾಲಿನ ಕರ್ನಾಟಕ ಸಾಹಿತ್ಯ ಅಕಾಡೆಮಿಯವರು ಸಂಶೋಧನೆ ಪ್ರಕಾರದಲ್ಲಿ ಅತ್ಯುತ್ತಮ ಕೃತಿಯೆಂದು ಪರಿಗಣಿಸಿ, ಪುಸ್ತಕ ಬಹುಮಾನ ಪ್ರಶಸ್ತಿ ನೀಡಿದೆ.

ನಮ್ಮ ಜನ
NAMMA JANA



| ಚಿನ್ನದ ಬೆಲೆ | |
|---|---|
| 91.6 ಕೆಡಿಎಂ (ಗ್ರಾಂ) | 5500 |
| 85 ಕೆಡಿಎಂ (ಗ್ರಾಂ) | 5100 |



| ಬೆಳ್ಳಿ ಬೆಲೆ | |
|---|---|
| ಕೆಜಿ | 63500 |



# ಕಾಂಗ್ರೆಸ್ ಕಚೇರಿಯಲ್ಲಿ ಇಂದಿರಾ ಪುಣ್ಯಸ್ಮರಣೆ

» **ಚಿತ್ರದುರ್ಗ**

ಇಂದಿರಾಗಾಂಧಿಯವರು ತಮ್ಮ ಅಧಿಕಾರದ ಅವಧಿಯಲ್ಲಿ ಬಡವರಿಗಾಗಿ ಜಾರಿ ಮಾಡಿದ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಜನತೆಗೆ ತಿಳಿಸುವಂತ ಕಾರ್ಯವಾಗಬೇಕಿದೆ. ಇದರೊಂದಿಗೆ ಅವರ ತತ್ವಗಳು ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಕಾರ್ಯವನ್ನು ಮಾಡಿದಾಗ ನಿಜವಾದ ಅರ್ಥದಲ್ಲಿ ಅವರಿಗೆ ಶ್ರದ್ದಾಂಜಲಿಯನ್ನು ಸಲ್ಲಿಸಿದಂತೆ ಆಗುತ್ತದೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್‌ನ ಜಿಲ್ಲಾಧ್ಯಕ್ಷರಾದ ಶ್ರೀಮತಿ ಗೀತಾ ನಂದಿನಿ ಗೌಡ ರವರು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಮತ್ತು ಜಿಲ್ಲಾ ಮಹಿಳಾ ಕಾಂಗ್ರೆಸ್ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಿ, ಎಐಸಿಸಿಯ ಮಾಜಿ ಅಧ್ಯಕ್ಷೆ ಶ್ರೀಮತಿ ಇಂದಿರಾಗಾಂಧಿಯವರ 39ನೇ ಪುಣ್ಯ ಸ್ಮರಣೆ ಮತ್ತು ಸರ್ದಾರ ವಲ್ಲಭಾಯಿ ಪಟೇಲ್ ರವರು 149ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು.

ಇಂದಿರಾಗಾಂಧಿಯವರು ಪ್ರಧಾನ ಮಂತ್ರಿಗಳಾಗಿದ್ದಾಗ ಬಡವರಿಗಾಗಿ ಉತ್ತಮವಾದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡುವುದರ ಮೂಲಕ ಬಡವರ ಪ್ರಗತಿಗೆ ಪೂರಕವಾಗಿದ್ದರು. ತತ್ವ ಸಿದ್ದಾಂತದ ಅಡಿಯಲ್ಲಿ ಧ್ಯೇಯೋದ್ದೇಶದಿಂದ ಉತ್ತಮವಾದ ಕಾರ್ಯಕ್ರಮಗಳನ್ನು ನೀಡಿದ್ದಾರೆ. ಇಂದಿನ ದಿನಮಾನದಲ್ಲಿ ಇತಿಹಾಸವನ್ನು ಮರೆಯುವರು ಜಾಸ್ತಿಯಾಗಿದ್ದಾರೆ. ಅಂತಹರಿಗೆ ಪಕ್ಷದವರು ತಳಿಸುವಮತ ಕಾರ್ಯವನ್ನು ಮಾಡಬೇಕಿದೆ. ಕಾಂಗ್ರೆಸ್




ಪಕ್ಷದ ಪದಾಧಿಕಾರಿಗಳಿಗೆ ಕಾಂಗ್ರೆಸ್ ಇತಿಹಾಸದ ಬಗ್ಗೆ ತಿಳಿಸುವಮತ ಕಾರ್ಯವಾಗಬೇಕಿದೆ.ಅದರಬಗ್ಗೆಅರಿವನ್ನು ಮೂಡಿಸಬೇಕಿದೆ. ಇಂದಿರಾರವರು ಪಂಚವಾರ್ಷಿಕ ಯೋಜನೆಯನ್ನು ಜಾರಿ ಮಾಡುವುದರ ಮೂಲಕ ಡ್ಯಾಂ, ಉತ್ತಮವಾದ ಕಟ್ಟಡಗಳನ್ನು ನಿರ್ಮಾಣ ಮಾಡಿದರು ಎಂದರು.

ದೇಶದಲ್ಲಿ ಆಹಾರ ಕೊರತೆ ಕಂಡು ಬಂದಾಗ ಹೊರ ದೇಶದಿಂದ ಅಹಾರವನ್ನು ತರಿಸುವುದರ ಮೂಲಕ ಜನತೆಯ ಹಸಿವನ್ನು ತಣಿಸುವುದರ ಮೂಲಕ ದೇಶದ ಪ್ರಗತಿಗೆ ಕಾರಣರಾಗಿದ್ದಾರೆ. ಹುಟ್ಟಿನಿಂದ ಶ್ರೀಮಂತರಾದರು ಸಹಾ ಬಡವರ ಪರವಾದ ಕಾಳಜಿಯನ್ನು ಹೊಂದುವುದರ ಮೂಲಕ ಅವರಿಗಾಗಿ ವಿವಿಧ ರೀತಿಯ ಯೋಜನೆಯನ್ನು ಜಾರಿ ಮಾಡಿದರು. ನ.19 ರಂದು ಇಂದಿರಾಗಾಂಧಿಯವರ ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಣೆ ಮಾಡಲಾಗುವುದೆಂದು ಶ್ರೀಮತಿ ಗೀತಾ ನಂದಿನಿ ಗೌಡ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶೀ ಸಂಪತ್ ಕುಮಾರ್ ಮಾತನಾಡಿ, ಇಂದಿರಾಗಾಂಧಿಯವರು ದಿಟ್ಟ ಮಹಿಳೆಯಾಗಿದ್ದರು ದೇಶದ ಪರವಾಗಿ ದಿಟ್ಟವಾದ ನಿರ್ಧಾರಗಳನ್ನು ತೆಗೆದುಕೊಳ್ಳುವುದರ ಮೂಲಕ ದೇಶದ ಪ್ರಗತಿಗೆ ಕಾರಣರಾಗಿದ್ದರು. ದೇಶದಲ್ಲಿ 20 ಅಂಶಗಳನ್ನು ಜಾರಿ ಮಾಡುವುದರ ಮೂಲಕ ಎಲ್ಲರ ಸರ್ವತೋಮುಖವಾದ ಬೆಳವಣಿಗೆಗೆ ಕಾರಣರಾದರು. ಇದುವರೆವಿಗೆ ಇಂತಹ ನಿರ್ಧಾರಗಳನ್ನು ಯಾವ ಪ್ರದಾನ ಮಂತ್ರಿಯೂ ಸಹಾ ತೆಗೆದುಕೊಂಡಿಲ್ಲ, ಉಗ್ರಗಾಮಿಗಳನ್ನು ಸದೆ ಬಡಿಯುವುದರ ಮೂಲಕ ದೇದ ರಕ್ಷಣೆಯನ್ನು ಮಾಡಿದ್ದಾರೆ ಎಂದರು.

ಮತ್ತೋರ್ವ ಪ್ರಧಾನ ಕಾರ್ಯದರ್ಶಿಗಳಾದ ಮೈಲಾರಪ್ಪ ಮಾತನಾಡಿ, ಅಂದಿನ ಕಾಲದಲ್ಲಿ ಇಂದಿರಗಾಂಧಿಯವರ ಹೆಸರನ್ನು ಹೇಳಿಕೊಂಡು ಚುನಾವಣೆಯನ್ನು ನಡೆಸಲಾಗುತ್ತಿತು. ಇವರ ನಂತರ ಬಂದ ರಾಜೀವಗಾಂಧಿಯವರು ಸಹಾ ಉತ್ತಮವಾದ ಆಡಳಿತವನ್ನು ನೀಡಿದರು. ಗಾಂಧಿಯವರ ಮನೆತನ ದೇಶಕ್ಕಾಗಿ ತಮ್ಮ ಪ್ರಾಣವನ್ನೇ ನೀಡಿದ್ದಾರೆ ಆದರೆ ಬಿಜೆಪಿಯವರು ಯಾರು ಸಹಾ ದೇಶಕ್ಕಾಗಿ ಪ್ರಾಣವನ್ನು ನೀಡಿಲ್ಲ, ಗಾಂಧಿ ಮನೆತನದ ತ್ಯಾಗ ಬಲಿದಾನದಿಂದ ದೇಶ ಉತ್ತಮವಾಗಿದೆ ಎಂದರು.

ಜಿಲ್ಲಾಕಾಂಗ್ರೆಸ್ಅಧ್ಯಕ್ಷರಾದತಾಜ್‌ಪೀರ್ ಮಾತನಾಡಿ, ಇಂದಿರಗಾಂಧಿ ಮತ್ತು ಸರ್ದಾರ ವಲ್ಲಬಾಯಿ ಪಟೇಲ್ ರವರು ಸ್ವಾತಂತ್ರ್ಯ ಹೋರಾಟಗಾರರಾಗಿದ್ದರು. ದೇಶ ವಿಭಜನೆಯನ್ನು ವಿರೋಧಿಸಿ ಹೋರಾಟವನ್ನು ಮಾಡಿದರು. ಉಗ್ರವಾದಿಗಳನ್ನು ಬಗ್ಗು ಬಡಿದಿದ್ದಕ್ಕೆ ಅವರ ಪ್ರಾಣವನ್ನು ತೆಗೆಯಲಾಯಿತು. ಬಡತನ ನಿರ್ಮೂಲನೆಗಾಗಿ ಉತ್ತಮವಾದ ಕಾರ್ಯಕ್ರಮಗಳನ್ನು ಜಾರಿ ಮಾಡಿದರು. ಗಾಂಧಿ ಕುಟುಂಬ ಅಧಿಕಾರ ಆಸೆಯನ್ನು ಇಟ್ಟುಕೊಂಡಿಲ್ಲ ಅಧಿಕಾರವನ್ನು ತ್ಯಾಗ ಮಾಡಿದ್ದಾರೆ. ಇಂದಿರಾಗಾಂಧಿಯವರ ಬಗ್ಗೆ ಪಕ್ಷದವರು ಸರಿಯಾದ ರೀತಿಯಲ್ಲಿ ತಿಳಿದುಕೊಂಡಾಗ ಬೇರೆಯವರಿಗೆ ತಿಳಿಸಲು ಸಹಾಯವಾಗುತ್ತದೆ ಎಂದರು.

ಸರ್ದಾರ್ ವಲ್ಲಬಾಯಿ ಪಟೇಲ್‌ರವರು ಉಕ್ಕಿನ ಮನುಷ್ಯರೆಂದು ಹೆಸರು ಪಡೆದಿದ್ದರು. ಗೃಹ ಮಂತ್ರಿಯಾಗಿದ್ದಾಗ ಆರ್‌ಎಸ್‌ಎಸ್‌ನ್ನು ರದ್ದು ಮಾಡಿದ್ದರು. ತಮ್ಮ ಕರ್ತವ್ಯ ಸಮಯದಲ್ಲಿ ನಿರ್ಲಕ್ಷ್ಯವನ್ನು ವಹಿಸಿರಲಿಲ್ಲ, ಕರ್ತವ್ಯ ಪ್ರಜ್ಞೆಯನ್ನು ಬೆಳೆಸಿಕೊಂಡಿದ್ದರು ಎಂದು ತಾಜ್‌ಪೀರ್ ತಿಳಿಸಿದರು.

ನಾಯಕತ್ವ ಶಿಬಿರ ; ಇಂದಿನ ಯುವ ಕಾರ್ಯಕರ್ತರಿಗೆ ಕಾಂಗ್ರೆಸ್ ಇತಿಹಾಸದ ಬಗ್ಗೆ ಮತ್ತು ಪಕ್ಷದ ಬಗ್ಗೆ ತಿಳಿಸಿಕೊಂಡುವ ಸಲುವಾಗಿ ನವಂಬರ್ ಅಥವಾ ಡಿಸೆಂಬರ್‌ನಲ್ಲಿ ಚಿತ್ರದುರ್ಗದಲ್ಲಿ ನಾಯಕತ್ವ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗುವುದು, ಇದಕ್ಕಾಗಿ ಕಾಂಗ್ರೆಸ್ ಪಕ್ಷದಲ್ಲಿ ಪ್ರತ್ಯೇಕವಾಗಿ ಘಟಕವನ್ನು ನಿರ್ಮಾಣ ಮಾಡಲಾಗಿದೆ. ಇದು ರಾಜ್ಯದಲ್ಲಿ ಶಿಬಿರಗಳನ್ನು ನಡೆಸಲು ಮುಂದಾಗಿದೆ ಈ ಹಿನ್ನಲೆಯಲ್ಲಿ ಚಿತ್ರದುರ್ಗದಲ್ಲಿಯೇ ಪ್ರಥಮ ಶಿಬಿರವಾಗಲಿ ಎನ್ನಲಾಗುತ್ತಿದ್ದು ಇದಕ್ಕಾಗಿ ನಿಜಲಿಂಗಪ್ಪರವರ ಸ್ಮಾರಕದ ಬಳಿ ಜಾಗವನ್ನು ಹನುಮಂತಪ್ಪರವರಿಗೆ ಕೇಳಲಾಗಿದೆ ಅವರು ಸಮ್ಮತಿಸಿದ ನಂತರ ಶಿಬಿರವನ್ನು ಹಮ್ಮಿಕೊಳ್ಳಲಾಗುವುದೆಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್‌ಪೀರ್ ತಿಳಿಸಿದರು.

ಕಾರ್ಯಕ್ರಮದಲ್ಲಿ ನಗರಸಭಾ ಸದಸ್ಯರಾದ ಮೀನಾಕ್ಷಿ,ಚೋಟು,ಅಬ್ದುಲ್, ರವಿಕುಮಾರ್ ಎನ್.ಡಿ.ಕುಮಾರ್, ನರಸಿಂಹಮೂರ್ತಿ, ಭಾಗ್ಯಮ್ಮ, ಸುಧಾ, ರತ್ನಮ್ಮ ಇಂದಿರಾ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಬಾಲಗೌರವ ಪ್ರಶಸ್ತಿಗೆ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ 2022-23ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರ್‌ರಾಷ್ಟ್ರ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದ ಒಳಗಿನ ಮಕ್ಕಳಿಂದ ಬಾಲಗೌರವ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ನವೆಂಬರ್ 18 ಅರ್ಜಿ ಸಲ್ಲಿಸಲು ಕೊನೆಯ ದಿನ.ಮಕ್ಕಳು ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತು ಸಂಶೋಧನೆಯಲ್ಲಿ ಹೀಗೆ 6 ಕ್ಷೇತ್ರಗಳಲ್ಲಿ ಅಸಾಧಾರಣಾ ಸಾಧನೆಯನ್ನು ಮಾಡಿ ಪ್ರಶಸ್ತಿ ಪಡೆದ ಪುರಸ್ಕೃತ ಮಗುವಾಗಿರಬೇಕು. ಇಂತಹ ಮಕ್ಕಳು ಅಕಾಡೆಮಿ ಬಾಲಗೌರವ ಪ್ರಶಸ್ತಿಗಾಗಿ ತಮ್ಮ ಸ್ವಯಂ ಧೃಢೀಕೃತ ನಕಲು ದಾಖಲೆಗಳೊಂದಿಗೆ ಹಾಗೂ ಸ್ವವಿವರಗಳನ್ನೊಳಗೊಂಡ ಮನವಿಯೊಂದಿಗೆ ಅರ್ಜಿಯನ್ನು ನವಂಬರ್ 18 ರೊಳಗಾಗಿ ಅಕಾಡೆಮಿಯ ಕೇಂದ್ರ ಕಚೇರಿ ವಿಳಾಸಕ್ಕೆ ಪೋಸ್ಟ್ ಮುಖಾಂತರ ಕಳುಹಿಸಬಹುದು. ನಂತರ ಬಂದ ಅರ್ಜಿಗಳನ್ನು ಮತ್ತು ಈಗಾಗಲೇ ಬಾಲಗೌರವ ಪ್ರಶಸ್ತಿ ಪಡೆದವರ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.ಪ್ರಶಸ್ತಿಯ ಅರ್ಜಿ ನಮೂನೆ ಮಾನದಂಡಗಳನ್ನು ಕಚೇರಿಯ ವೆಬ್‌ಸೈಟ್ https://balavikasaacademy.karnataka.gov.in ನಲ್ಲಿ ವೀಕ್ಷಿಸಬಹುದು. ಹೆಚ್ಚಿನ ಮಾಹಿತಿಗಾಗಿ ಯೋಜನಾಧಿಕಾರಿಗಳು, ಚಂದ್ರಿಕಾ ಲೇ ಔಟ್ ಹಿಂಭಾಗ, ಕೆಎಚ್‌ಬಿ ಕಾಲೋನಿ, ಲಕಮನಹಳ್ಳಿ ಧಾರವಾಡ-580004, ದೂರವಾಣಿ ಸಂಖ್ಯೆ 0836-2461666 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಖಾಸಗಿ ವಿದ್ಯಾಸಂಸ್ಥೆಗಳ ವಾಹನಗಳ ಮೇಲೆ ಆಂಗ್ಲ ಭಾಷೆ ಮುದ್ರಣಕ್ಕೆ ವಿರೋಧ



» **ಚಳ್ಳಕೆರೆ**

ನಗರದ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಖಾಸಗಿ ವಿದ್ಯಾಸಂಸ್ಥೆಗಳು ತಮ್ಮ ಸಂಸ್ಥೆಯ ಬಸ್‌ಗಳ ಮೇಲೆ ವಿದ್ಯಾಸಂಸ್ಥೆಯ ಹೆಸರನ್ನು ಆಂಗ್ಲಭಾಷೆಯಲ್ಲಿ ಬರೆಸಿದ್ದು, ನ.10ರೊಳಗೆ ಕನ್ನಡಭಾಷೆಯಲ್ಲಿ ಹೆಸರು ಬರೆಸುವಂತೆ ಒತ್ತಾಯಿಸಿ ಕನ್ನಡ ರಕ್ಷಣಾ ಮತ್ತು ಸಾಂಸ್ಕೃತಿಕ ವೇದಿಕೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ. ವೇದಿಕೆಯ ಅಧ್ಯಕ್ಷ, ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ನೇತೃತ್ವದಲ್ಲಿ ಮನವಿ ನೀಡಿ, ಖಾಸಗಿ ವಿದ್ಯಾಸಂಸ್ಥೆಗಳ ಬಸ್‌ಗಳು ತಮ್ಮ ವಿದ್ಯಾಸಂಸ್ಥೆಯ ಹೆಸರುಗಳನ್ನು ಕೇವಲ ಆಂಗ್ಲ ಭಾಷೆಯಲ್ಲಿ ಮಾತ್ರ ಬರೆಸಿದ್ದು, ಎಲ್ಲಿಯೂ ಕನ್ನಡ ಭಾಷೆಯನ್ನು ಉಪಯೋಗಿಸದೆ ನಿರ್ಲಕ್ಷ್ಯ ತಾಳಿದ್ದಾರೆ. ಇದರಿಂದ ಕನ್ನಡ ಭಾಷೆಯ ಬೆಳವಣಿಗೆ ಮತ್ತು ಬಳಕೆಗೆ ಇವರ ನಿರ್ಲಕ್ಷ್ಯ ಸಹಿಸಲು ಸಾಧ್ಯವಿಲ್ಲ. ಆದ್ದರಿಂದ ಇನ್ನೂ ಹತ್ತು ದಿನಗಳ ಒಳಗೆ ಕನ್ನಡದಲ್ಲಿ ಹೆಸರು ಬರೆಸದೇ ಇದ್ದರೆ ಹೋರಾಟ ನಡೆಸುವ ಎಚ್ಚರಿಕೆಯನ್ನು ನೀಡಿದರು. ಮನವಿ ಸ್ವೀಕರಿಸಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಸರ್ಕಾರದ ಆಡಳಿತ ಭಾಷೆಯಾಗಿ ಕನ್ನಡ ಜಾರಿಯಲಿದ್ದು, ಖಾಸಗಿ ವಿದ್ಯಾಸಂಸ್ಥೆಗಳು ತಮ್ಮ ವಾಹನಗಳ ಮೇಲೆ ಕನ್ನಡ ಬದಲಾಗಿ ಆಂಗ್ಲ ಭಾಷೆಗೆ ಒತ್ತು ನೀಡಿದ್ದು, ಸರಿಯಲ್ಲ ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ವಿದ್ಯಾಸಂಸ್ಥೆಗಳ ಆಡಳಿತ ಮಂಡಳಿಗೆ ಸೂಚನೆ ನೀಡಿ ಸರಿಪಡಿಸುವ ಭರವಸೆ ನೀಡಿದರು. ಸಮಾಜ ಸೇವಕ ಎಚ್.ಎಸ್.ಸೈಯದ್, ಪಗಡಲಬಂಡೆಎಚ್.ನಾಗೇಂದ್ರಪ್ಪ, ಎಸ್. ಚಂದ್ರಶೇಖರ್, ಎಚ್.ಮಹಂತೇಶ್, ಪಿ.ರಮೇಶ್, ಕೆ.ನಾಗರಾಜು ಮುಂತಾದವರು ಉಪಸ್ಥಿತರಿದ್ದರು.

### ಶೇ.50 ರಷ್ಟು ರಿಯಾಯಿತಿ ದರಗಳಲ್ಲಿ ಪುಸ್ತಕ ಮಾರಾಟ

» **ದಾವಣಗೆರೆ**

ಕನ್ನಡ ರಾಜ್ಯೋತ್ಸವದ ಅಂಗವಾಗಿ 2023 ರ ನವೆಂಬರ್ ತಿಂಗಳು ಪೂರ್ತಿ ಕನ್ನಡ ಪುಸ್ತಕ ಪ್ರಾಧಿಕಾರದ ಎಲ್ಲಾ ಪುಸ್ತಕಗಳನ್ನು ಶೇ.50 ರಷ್ಟು ರಿಯಾಯಿತಿ ದರಗಳಲ್ಲಿ ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯಲ್ಲಿ (ಸಂಪರ್ಕ ಸಂಖ್ಯೆ:080-22107705)ಹಾಗೂ ಎಲ್ಲಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ತೆರೆಯಲಾದ ಎಲ್ಲಾ ಸಿರಿ ಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ಈ ರಿಯಾಯಿತಿ ಸೌಲಭ್ಯ ದೊರೆಯಲಿದೆ. ಆಸಕ್ತ ಪುಸ್ತಕ ಪ್ರಿಯರು ಈ ಅವಕಾಶ ಬಳಸಿಕೊಳ್ಳಲು ಕೋರಿದೆ. ಅಲ್ಲದೆ ಕನ್ನಡ ಪುಸ್ತಕ ಪ್ರಾಧಿಕಾರದ ಆನ್‌ಲೈನ್ www.kannadapustak apradhikara.com ನಲ್ಲಿ ಕೂಡ ಶೇ.50 ರಿಯಾಯಿತಿಯಲ್ಲಿ ಲಭ್ಯವಿದೆ ಎಂದು ಆಡಳಿತಾಧಿಕಾರಿ ಕೆ.ಬಿ ಕಿರಣ್‌ಕುಮಾರ್ ತಿಳಿಸಿದ್ದಾರೆ.

# ದೇವರ ಎತ್ತುಗಳಿಗೆ ಮೇವು ಸರಬರಾಜು ಮಾಡಲು ಸರ್ಕಾರ ವಿಫಲ: ಸ್ವಾಮೀಜಿ ಕಿಡಿ

» **ಚಳ್ಳಕೆರೆ**

ಚಳ್ಳಕೆರೆ ಹಾಗೂ ಮೊಳಕಾಲ್ಮೂರು ತಾಲ್ಲೂಕುಗಳ ದೇವರ ಎತ್ತುಗಳು ಸೇರಿದಂತೆ ಸಾವಿರಾರು ಜಾನುವಾರುಗಳು ಉಪವಾಸದಿಂದ ಮರಣ ಹೊಂದುವುದನ್ನು ತಪ್ಪಿಸಲು ಬೆಂಗಳೂರಿನ ಸುಧಾಮೂರ್ತಿ ಟ್ರಸ್ಟ್ ವತಿಯಿಂದ ಇದುವರೆಗೂ 110 ಟನ್ ಮೇವನ್ನು ಆಂಧ್ರಪ್ರದೇಶದಿಂದ ತರೆಸಿ, ಎರಡೂ ತಾಲ್ಲೂಕುಗಳ ಜಾನುವಾರುಗಳಿಗೆ ವಿತರಣೆ ಮಾಡಿದ್ದು, ಈ ಬಗ್ಗೆ ಸರ್ಕಾರದ ನಿರ್ಲಕ್ಷ್ಯಕ್ಕೆ ಪಾವಗಡ ರಾಮಕೃಷ್ಣ ಸೇವಾಶ್ರಮದ ಜಪಾನಂದಸ್ವಾಮೀಜಿ ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ತಾಲ್ಲೂಕಿನ ನನ್ನಿವಾಳ ಬೋಮ್ಮದೇವರಹಟ್ಟಿ, ಅಜ್ಜಯ್ಯನಗುಡಿ, ತುರುನೂರು ಹೋಬಳಿ ಬೆಳಗಟ್ಟ, ಮೊಳಕಾಲ್ಮೂರು ತಾಲ್ಲೂಕಿನ ಮುತ್ತಿಗಾರಹಳ್ಳಿ, ಹಿರೇಕೆರೆ ಕಾವಲು, ಚನ್ನಬಸಯ್ಯನಹಟ್ಟಿ ಮುಂತಾದ ಕಡೆಗಳಲ್ಲಿ ದೇವರ ಎತ್ತುಗಳು ಹಸಿವಿನಿಂದ ಸಾವಿನ ಕಡೆ ಮುಖಮಾಡಿದ್ದವು. ಅವುಗಳ ಸಂರಕ್ಷಣೆ ಮಾಡುತ್ತಿದ್ದ ಕಿಲಾರಿಗಳು, ರೈತರು ದೇವರ ಎತ್ತುಗಳು, ಜಾನುವಾರುಗಳನ್ನು ಸಂರಕ್ಷಿಸಿಕೊಳ್ಳಲು ಸಾಧ್ಯವಾಗದೆ ಹತಾಶರಾಗಿದ್ದರು. ಈ ಬಗ್ಗೆ ಮಾಹಿತಿ ಪಡೆದ ಮೂರ್ತಿ ಟ್ರಸ್ಟ್ ಅಧ್ಯಕ್ಷ ಸುಧಾಮೂರ್ತಿ ತಮ್ಮ ಟ್ರಸ್ಟ್ ವತಿಯಿಂದ 110 ಟನ್ ಮೇವು ನೀಡಿ ಜಾನುವಾರುಗಳ ಸಂರಕ್ಷಣೆ ಮಾಡಿದ್ದಾರೆ.

ಆದರೆ, ಈ ಬಗ್ಗೆ ಸರ್ಕಾರದವತಿಯಿಂದ ಇದುವರೆಗೂ ಯಾವುದೇ ಮೇವು ನೀಡಿಲ್ಲ. ಪಶುವೈದ್ಯ ಇಲಾಖೆ ಅಧಿಕಾರಿಗಳು ಸಹ ಸರ್ಕಾರದ ಮೇಲೆ ಒತ್ತಡ ಹೇರುತ್ತಿಲ್ಲ. ಕ್ಷೇತ್ರದ





ಶಾಸಕರಿಗೆ ಈ ಬಗ್ಗೆ ಮನವಿ ಮಾಡಿದಾಗ ಸ್ಪಂದಿಸುವ ಭರವಸೆ ನೀಡಿದ್ದರು. ಆದರೆ, ನಿರೀಕ್ಷಿತ ಮಟ್ಟದಲ್ಲಿ ಸಹಾಯವಾಗಲಿಲ್ಲ. ಆದ್ದರಿಂದ ಮತ್ತೊಮ್ಮೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿಯವರೊಂದಿಗೆ ರೈತರು, ಕಿಲಾರಿಗಳೊಂದಿಗೆ ಸಭೆ ನಡೆಸಿ ಮುಂದಿನ ಹೋರಾಟದ ಬಗ್ಗೆ ನಿರ್ಧಾರ ಕೈಗೊಳ್ಳುವುದಾಗಿ ತಿಳಿಸಿದರು.

ಜಿಲ್ಲಾಡಳಿತ ಹಾಗೂ ತಾಲ್ಲೂಕು ಆಡಳಿತ ಈ ಭಾಗದ ಜಾನುವಾರುಗಳಿಗೆ ಮೇವು ನೀಡುವ ವಿಚಾರದಲ್ಲಿ ಮೌನಕ್ಕೆ ಶರಣಾಗಿದ್ದು ಇದು ಸರ್ಕಾರದ ನಿರ್ಲಕ್ಷ್ಯತನಕ್ಕೆ ಹಿಡಿದ ಕೈಗನ್ನಡಿ. ಜಾನುವಾರುಗಳ ಪ್ರಾಣ ರಕ್ಷಣೆಗೆ ಸರ್ಕಾರ ಮುಂದಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ಅಧ್ಯಕ್ಷೆ ಸುಧಾಮೂರ್ತಿಯವರು ಮಳೆ ಬಂದು ಮೇವು ಆಗುವವರೆಗೂ ಜಾನುವಾರುಗಳ ರಕ್ಷಣೆ ಮಾಡುವ ಜವಾಬ್ದಾರಿಯನ್ನು ಹೊತ್ತಿದ್ದು,ಮುಂದಿನ ದಿನಗಳಲ್ಲೂ ಜಾನುವಾರಿಗೆ ಹಂತ, ಹಂತವಾಗಿ ಮೇವು ಸರಬರಾಜು ಮಾಡಲಾಗುವುದು ಎಂದರು.

ಸಂಯೋಜಕರಾದ ಸಿ.ಪಿ.ಮಹೇಶ್, ಸಿದ್ದೇಶ್, ಕಿಲಾರಿಗಳಾದ ಮುತ್ತಯ್ಯ, ಪಾಲಯ್ಯ, ಮಂಜಣ್ಣ ಮುಂತಾದವರು ಉಪಸ್ಥಿತರಿದ್ದರು.

# ಜಿಲ್ಲಾಧಿಕಾರಿ ದಿವ್ಯಪ್ರಭು ವರ್ಗಾವಣೆಗೆ ವಿರೋಧ



**ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜಿ. ವರ್ಗಾವಣೆಯನ್ನು ರದ್ದುಪಡಿಸಿ ಚಿತ್ರದುರ್ಗದಲ್ಲಿಯೇ ಮುಂದುವರೆಸುವಂತೆ ಕರುನಾಡ ವಿಜಯಸೇನೆಯಿಂದ ಮನವಿ.**

» **ಚಿತ್ರದುರ್ಗ**

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜಿ. ಇವರ ವರ್ಗಾವಣೆಯನ್ನು ರದ್ದುಪಡಿಸಿ ಇಲ್ಲಿಯೇ ಮುಂದುವರೆಸುವಂತೆ ಕರುನಾಡ ವಿಜಯಸೇನೆಯಿಂದ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಲಾಯಿತು.

ದಿವ್ಯಪ್ರಭುರವರು ಜಿಲ್ಲಾಧಿಕಾರಿಯಾಗಿ ಜಿಲ್ಲೆಗೆ ಆಗ ಮಿಸಿದಾಗಿನಿಂದಲೂ ಉತ್ತಮ ಆಡಳಿತ ನೀಡುತ್ತಿದ್ದು, ಸಾರ್ವಜನಿಕರ ಕುಂದುಕೊರತೆ, ಅಹವಾಲುಗಳನ್ನು ಸಮಾಧಾನದಿಂದ ಆಲಿಸುತ್ತಾರೆ. ಕಾನೂನು ಬಾಹಿರ ಚಟುವಟಿಕೆಗಳಿಗೆ ಆಸ್ಪದವಿಲ್ಲ. ಇಂತಹ ದಕ್ಷ ಅಧಿಕಾರಿಯನ್ನು ವರ್ಗಾವಣೆಗೊಳಿಸಿರುವುದರ ಹಿಂದೆ ರಾಜಕೀಯ ಪಿತೂರಿ ಅಡಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ವರ್ಗಾವಣೆಯನ್ನು ರದ್ದುಪಡಿಸಬೇಕೆಂದು ಕರುನಾಡ ವಿಜಯಸೇನೆ ಕಾರ್ಯಕರ್ತರು ಒತ್ತಾಯಿಸಿದರು. ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಉಪಾಧ್ಯಕ್ಷೆ ರತ್ನಮ್ಮ ಈ ಸಂದರ್ಭದಲ್ಲಿದ್ದರು.

## ಪ್ರಮುಖ ಸುದ್ದಿ

# ಗ್ರಾಮೀಣ ಜನರು ಆರೋಗ್ಯ ಸುಧಾರಣೆಗೆ ಹೆಚ್ಚು ಆದ್ಯತೆ ನೀಡಿ

» **ಚಳ್ಳಕೆರೆ**

ಗ್ರಾಮೀಣ ಭಾಗದ ಜನರು ತಮ್ಮ ದಿನನಿತ್ಯದ ಒತ್ತಡ ಕಾರ್ಯಗಳ ನಡುವೆಯೂ ಸಹ ಆರೋಗ್ಯದ ಬಗ್ಗೆ ವಿಶೇಷ ಗಮನ ನೀಡಬೇಕು. ಪ್ರತಿಯೊಬ್ಬ ವ್ಯಕ್ತಿ ತನ್ನ ಆರೋಗ್ಯವನ್ನು ವ್ಯವಸ್ಥಿತ ರೀತಿಯಲ್ಲಿ ಸುಧಾರಣೆ ಮಾಡಿಕೊಳ್ಳಬೇಕು. ಸರ್ಕಾರ ಪ್ರತಿಯೊಬ್ಬ ವ್ಯಕ್ತಿಯೂ ಉತ್ತಮ ಆರೋಗ್ಯವಂತನಾಗಿರಬೇಕೆಂಬ ಆಶಯವನ್ನು ಗ್ರಾಮಸ್ಥರು ಈಡೇರಿಸುವತ್ತ ಗಮನ ನೀಡಬೇಕೆಂದು ಗೋಪನಹಳ್ಳಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಬಿಂದುಶ್ರೀ ತಿಳಿಸಿದರು.

ಅವರು, ದೊಡ್ಡೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಡಿ.ಉಪ್ಪಾರಹಟ್ಟಿ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ರಾಷ್ಟ್ರೀಯ ಯೋಜನಾ ಶಿಬಿರ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ತಾಲ್ಲೂಕಿನ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ



ಉತ್ತಮ ಚಿಕಿತ್ಸೆ ನೀಡುವಲ್ಲಿ ವೈದ್ಯರು ಯಶಸ್ವಿಯಾಗಿದ್ದಾರೆ. ನಿಯಮಿತ ಆಹಾರ ಸೇವನೆ, ವಾಯುವಿಹಾರ ಹಾಗೂ ಸುಖ ನಿದ್ದೆಯಿಂದ ಆರೋಗ್ಯ ಸುಧಾರಣೆಯಾಗಲಿದೆ. ಆಗಾಗ ವೈದ್ಯರಲ್ಲಿ ಆರೋಗ್ಯದ ಬಗ್ಗೆ ಮಾರ್ಗದರ್ಶನ ಪಡೆಯಬೇಕು ಎಂದರು. ಇದೇ ಸಂದರ್ಭದಲ್ಲಿ ಗ್ರಾಮದ ನೂರಾರು ಜನರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು. ವೈಜ್ಞಾನಿಕ ವಿಚಾರಗಳ ಬಗ್ಗೆ ಉಪನ್ಯಾಸ ನೀಡಿದ ಮೊಳಕಾಲ್ಮೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಗೋವಿಂದಪ್ಪ, ಸಾಮಾನ್ಯವಾಗಿ ಗ್ರಾಮಾಂತರ ಪ್ರದೇಶಗಳಲ್ಲಿ ಉತ್ತಮನೈಸರ್ಗಿಕ ವಾತಾವರಣ ನಿರ್ಮಾಣವಾಗಿರುತ್ತದೆ. ನಗರ ಪ್ರದೇಶಗಳಿಗೆ ಹೋಲಿಸಿದಲ್ಲಿ ಗ್ರಾಮೀಣ ಪ್ರದೇಶದ ವಾತಾವರಣ ಹೆಚ್ಚು ಅನುಕೂಲಕರ. ಇಂದು ಸಮಾಜ ವೈಜ್ಞಾನಿಕ ವಿಚಾರಧಾರೆಗಳನ್ನು ಅನುಸರಿಸಿ ಅನೇಕ ಪದ್ದತಿಗಳಿಗೆ ತಿಲಾಂಜಲಿಯಾಡುತ್ತಿದೆ. ಮೂಡನಂಬಿಕೆ ಮತ್ತು ಮೌಢ್ಯತೆ ವಿರುದ್ದ ವಿದ್ಯಾರ್ಥಿಗಳು ಜಾಗೃತರಾಗಬೇಕಲ್ಲದೆ, ಸಾರ್ವಜನಿಕರಿಗೂ ಸಹ ಜಾಗೃತಿ ಉಂಟು ಮಾಡಬೇಕು ಎಂದರು.

ಕಾಟಪ್ಪನಹಟ್ಟಿಯ ತಿಪ್ಪೇಸ್ವಾಮಿ ಪವಾಡ ರಹಸ್ಯ ಕಾರ್ಯಕ್ರಮವನ್ನು ನಡೆಸಿ ಎಲ್ಲರ ಮೆಚ್ಚುಗೆ ಪಡೆದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಸದಸ್ಯೆ ಶಿಲ್ಪಶ್ರೀನಿವಾಸ್ ವಹಿಸಿದ್ದರು. ಶಿಬಿರಾಧಿಕಾರಿ ಬಿ.ಶಾಂತಕುಮಾರಿ ಶಿಬಿರದ ರೂಪುರೇಷೆಗಳ ಬಗ್ಗೆ ಮಾಹಿತಿ ನೀಡಿದರು. ಗುಂಡಣ್ಣ, ಕನ್ನಡ ಕುವೈತ್ ಕೂಟದ ತಾಲ್ಲೂಕು ವ್ಯವಸ್ಥಾಪಕ ರಾಜೇಶ್, ಮಂಜುನಾಥ, ಸದಸ್ಯರಾದ ಸಿರಿಗೊಂಡಪ್ಪ, ಶಿವಣ್ಣ, ಉಪನ್ಯಾಸಕರಾದ ಇಮ್ರಾನ್, ಸಂಜಯ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಡಿ. ೦೯ ರಂದು ರಾಷ್ಟ್ರೀಯ ಲೋಕ್ ಅದಾಲತ್

» ದಾವಣಗೆರೆ

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದ ಮೇರೆಗೆ ದಾವಣಗೆರೆ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಡಿ.9 ರಂದು ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ. ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಅತಿ ಹೆಚ್ಚು ಪ್ರಕರಣಗಳನ್ನು ವಿಲೇವಾರಿ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಉದ್ದೇಶಿಸಲಾಗಿದೆ. ಹೀಗಾಗಿ ದಾವಣಗೆರೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಜಿಲ್ಲೆಗಳಲ್ಲಿರುವ ಎಲ್ಲಾ ನ್ಯಾಯಾಲಯಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಲೋಕ್ ಅದಾಲತ್‌ನ್ನು ಆಯೋಜಿಸಲಿವೆ.ಈ ಲೋಕ್ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಚಾಲ್ತಿಯಲ್ಲಿರುವ ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಕಡಿಮೆ ಖರ್ಚಿನಲ್ಲಿ ಶೀಘ್ರವಾಗಿ ಪರಿಹರಿಸಿಕೊಳ್ಳಲು ಸಾರ್ವಜನಿಕರಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ.ರಾಜಿಯಾಗಬಲ್ಲ ಎಲ್ಲಾ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪರಿಹಾರ ಪ್ರಕರಣಗಳು, ಚೆಕ್ ಅಮಾನ್ಯ ಪ್ರಕರಣಗಳು, ಭೂಸ್ವಾಧೀನ ಪರಿಹಾರ ಪ್ರಕರಣಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಎಂ.ಎಂ.ಡಿ.ಆರ್. ಕಾಯ್ದೆಯಡಿಯ ಪ್ರಕರಣಗಳನ್ನು ಲೋಕ್ ಅದಾಲತ್‌ನಲ್ಲಿ ಪರಿಹರಿಸಿಕೊಳ್ಳಬಹುದು. ಕೌಟುಂಬಿಕ ನ್ಯಾಯಾಲಯದ ಪ್ರಕರಣಗಳು(ವಿಚ್ಛೇಧನ ಹೊರತುಪಡಿಸಿ), ಪಿಂಚಣಿ ಪ್ರಕರಣಗಳು, ವೇತನ ಭತ್ಯೆ ಸಂಬಂಧಿಸಿದ ಪ್ರಕರಣಗಳು, ವಿದ್ಯುತ್ ಹಾಗೂ ನೀರಿನ ಶುಲ್ಕ, ಕೈಗಾರಿಕೆ ಕಾರ್ಮಿಕರ ವೇತನ, ಕಾರ್ಮಿಕ ವಿವಾದ ಇತ್ಯಾದಿ ಪ್ರಕರಣಗಳನ್ನು ಪರಸ್ಪರ ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳಬಹುದು. ಸಾರ್ವಜನಿಕರು ರಾಷ್ಟ್ರೀಯ ಲೋಕ್ ಅದಾಲತ್‌ನ ಸಂಪೂರ್ಣ ಸದುಪಯೋಗ ಪಡೆದು ಕೊಳ್ಳಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ದಾವಣಗೆರೆ ಹಳೆಯ ನ್ಯಾಯಾಲಯ ಸಂಕೀರ್ಣದಲ್ಲಿರುವ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ ಇವರನ್ನು ದೂ.ಸಂ: 08192-296364, ತಾಲ್ಲೂಕು ಕಾನೂನು ಸೇವಾ ಸಮಿತಿಗಳಾದ ಹರಿಹರ ದೂ.ಸಂಃ 08192-296885, ಹೊನ್ನಾಳಿ ದೂ.ಸಂ: 08188-251732, ಚನ್ನಗಿರಿ ದೂ.ಸಂ: 08189-229195 ಮತ್ತು ಜಗಳೂರು ದೂ.ಸಂ: 08196-227600 ಇವರನ್ನು ಸಂಪರ್ಕಿಸಬಹುದೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ ಮ. ಕರಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜೀವಮಾನ ಸಾಧನೆ ಹಾಗೂ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ಕ್ಷೇತ್ರದಲ್ಲಿ ಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳಿಗೆ ಜೀವಮಾನ ಸಾಧನೆ ಪ್ರಶಸ್ತಿ ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ. 2022 ನೇ ಸಾಲಿನ ಹಿರಿಯ ಕ್ರೀಡಾಪಟು, ತರಬೇತುದಾರರಾಗಿ ಸಾಧನೆ ಮಾಡಿರುವ ಕರ್ನಾಟಕದ ಹಿರಿಯ ಕ್ರೀಡಾಪಟುಗಳು, ತರಬೇತುದಾರರುಗಳಿಂದ ಜೀವಮಾನ ಸಾಧನೆ ಪ್ರಶಸ್ತಿಗಾಗಿ ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡಲು ಕರ್ನಾಟಕ ಕ್ರೀಡಾ ರತ್ನ ಪ್ರಶಸಿಗಾಗಿ ಸೇವಾ ಸಿಂಧು ಆನ್‌ಲೈನ್ (ªÉ¨ï¸ÉÉmï: https://sevasindhuservices.karnataka.gov.in)ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ನ.30 ಕೊನೆಯ ದಿನ. ಹೆಚ್ಚಿನ ವಿವರಗಳಿಗೆ ದೂ.ಸಂ: 08192-237480 ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ಚಿತ್ರದುರ್ಗದ ಪಾರಂಪರಿಕ ವೈದ್ಯ ಕೆ.ಸುದರ್ಶನ್‌ಗೆ ವೈದ್ಯರತ್ನ ಪ್ರಶಸ್ತಿ



» ಚಿತ್ರದುರ್ಗ

ಆದಿಚುಂಚನಗಿರಿ ಮಹಾಸಂಸ್ಥಾನದಲ್ಲಿ ನಡೆದ ಪಾರಂಪರಿಕ ವೈದ್ಯರ ಹದಿನಾಲ್ಕನೆ ರಾಜ್ಯ ಸಮ್ಮೇಳನದಲ್ಲಿ ಚಿತ್ರದುರ್ಗದ ಪಾರಂಪರಿಕ ವೈದ್ಯ ಕೆ.ಸುದರ್ಶನ್ ರವರಿಗೆ ಅತ್ಯುನ್ನತ ವೈದ್ಯ ರತ್ನ ಪ್ರಶಸ್ತಿಯನ್ನು ನೀಡಿ ಸನ್ಮಾನಿಸಲಾಯಿತು. ಆದಿಚುಂಚನಗಿರಿ ಮಹಾಸಂಸ್ಥಾನದ ನಿರ್ಮಲಾನಂದನಾಥ ಸ್ವಾಮೀಜಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಅನೇಕ ಗಣ್ಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಮನೋರೋಗಕ್ಕೆ ಸಕಾಲದಲ್ಲಿ ಚಿಕಿತ್ಸೆ ಪಡೆಯಿರಿ

» ಚಿತ್ರದುರ್ಗ

ಮನೋರೋಗ ಬರುವುದು ನರಗಳ ವಿಕೇಸ್‌ನಿಂದ. ಇದು ಯಾವುದೇ ದೆವ್ವ, ಭೂತದ ಕಾಟದಿಂದ ಅಲ್ಲ ಸರಿಯಾದ ರೀತಿಯಲ್ಲಿ ಸಕಾಲದಲ್ಲಿ ಚಿಕಿತ್ಸೆಯನ್ನು ಪಡೆದರೆ ಅದನ್ನು ಗುಣ ಪಡಿಸಬಹುದಾಗಿದೆ ಎಂದು ಮನೋವೈದ್ಯ ಸಲಹೆಗಾರರಾದ ಡಾ. ಮಂಜುನಾಥ್ ತಿಳಿಸಿದರು.

ರೋಟರಿ ಕ್ಲಬ್ ಚಿನ್ಮೂಲಾದ್ರಿ ಆಶ್ರಯದಲ್ಲಿ ನಗರದ ಎಸ್.ಆರ್.ಬಿ.ಎಂ.ಎಸ್. ರೋಟರಿ ಬಾಲಭವನದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವಾರದ ಸಭೆಯಲ್ಲಿ ಮಾನಸಿಕ ಆರೋಗ್ಯವು ಸಾರ್ವತ್ರಿಕ ಮಾನವ ಹಕ್ಕು ಎಂಬ ವಿಷಯದ ಬಗ್ಗೆ ಮಾತನಾಡಿದ ಅವರು, ದೇಶದಲ್ಲಿ ಜನತೆ ಮಾನಸಿಕ ಖಾಯಿಲೆಗಳು ಎಂದು ಗುರುತಿಸದೇ ಅದನ್ನು ದೆವ್ವ, ಭೂತಗಳ ಕಾಟ ಎಂದು ಮಂತ್ರವಾದಿ, ಮಾಂತ್ರಿಕರ ಬಳಿ ಹೋಗುತ್ತಾರೆ, ಇದು ಸರಿಯಾದ ಕ್ರಮವಲ್ಲ, ಈ ಖಾಯಿಲೆ ಬರುವುದು ಮಾನವನ ದೇಹದಲ್ಲಿ ಆಗುವ ನರಗಳ ವೀಕೇಸ್‌ನಿಂದ ಹೊರೆತು ಯಾವುದೇ ದೆವ್ವ ಭೂತದ ಕಾಟದಿಂದ ಅಲ್ಲ ಎಂದರು.




ಮಾನಸಿಕ ಖಾಯಿಲೆ ಯಾರನ್ನು ಸಹಾ ಬಿಟ್ಟಿಲ್ಲ ಎಲ್ಲರನ್ನು ಸಹಾ ಉದ್ಯಮಿಗಳು, ಚಲನಚಿತ್ರ ನಟರು, ರಾಜಕಾರಣಿಗಳು, ಸಮಾನ್ಯ ಜನರನ್ನು ಸಹಾ ಈ ರೋಗ ಕಾಡುತ್ತದೆ. ಈ ಹಿಂದೆ ಇದನ್ನು ಮಾನಸಿಕ ಖಾಯಿಲೆ ಎಂದು ಇದು ಬಂದವರಿಗೆ ದೆವ್ವ ಹಿಡಿದಿದೆ ಇವರನ್ನು ಮಂತ್ರವಾದಿಗಳು ಇಲ್ಲವೇ ಅಜ್ಜಯ್ಯನ ಹತ್ತಿರ ಕರೆದುಕೊಂಡು ಹೋಗಿ ಎನ್ನುತ್ತಿದ್ದರು ಆದರೆ ವಿಜ್ಞಾನ ಬೆಳದಂತೆ ಈ ರೋಗಕ್ಕೂ ಸಹಾ ಚಿಕಿತ್ಸೆಯನ್ನು ಕಂಡು ಹಿಡಿಯಲಾಗಿದೆ. ಈ ಖಾಯಿಲೆಯ ಬಗ್ಗೆ ಜನರಿಗೆ ತಿಳುವಳಿಕೆಯನ್ನು ನೀಡಬೇಕಾದ ಅಗತ್ಯ ಇದೆ. ಜನರ ತಪ್ಪು ತಿಳುವಳಿಕೆಯಿಂದ ಹಲವಾರು ಮಾನಸಿಕ ರೋಗಿಗಳು ತೊಂದರೆಯನ್ನು ಪಡುತ್ತಿದ್ದಾರೆ ಎಂದು ತಿಳಿಸಿದರು.

ಮಾನಸಿಕ ರೋಗಿಗೆ ಚಿಕಿತ್ಸೆಯನ್ನು ನೀಡುವ ಮುಂಚೆ ಅವರ ಅನುಮತಿ ಪಡೆಯುವುದು ಅಗತ್ಯವಾಗಿದೆ ಈ ಹಿಂದೆ ಎಲ್ಲಾ ಮಾನಸಿಕ ರೋಗಿಗಳು ಎಂದರೆ ಸಾಕು ಚಿಕಿತ್ಸೆಯನ್ನು ನೀಡಲಾಗುತ್ತಿತು ಆದರೆ ಈಗ ಕಾನೂನು ಬಿಗಿಯಾಗಿದೆ, ಮಾನಸಿಕ ರೋಗಿಗಳ ಅಥವಾ ಅವರ ಸಂಬಂಧಿಗಳ ಅನುಮತಿಯನ್ನು ಪಡೆದ ನಂತರವೇ ಚಿಕಿತ್ಸೆಯನ್ನು ಪ್ರಾರಂಭ ಮಾಡಬೇಕಿದೆ. ಇಂತಹ ಕಾನೂನಿನ ಬಗ್ಗೆ ಜನರಿಗೆ ತಿಳುವಳಿಕೆ ನೀಡುವುದು ಅಗತ್ಯವಾಗಿದೆ. ಜನರಿಗೆ ಇದರ ಬಗ್ಗೆ ತಿಳುವಳಿಕೆ ಕಡಿಮೆಯಿದೆ ಎಂದು ನುಡಿದರು.

ಮಾನಸಿಕ ರೋಗಿಗಳು ಇಲ್ಲದಿರುವುದನ್ನು ಇದೆ ಎಂದು ತಿಳಿಸುವ ಕಾರ್ಯವನ್ನು ಮಾಡುತ್ತಾರೆ. ದೇಹದಲ್ಲಿನ ನರಗಳ ದೌರ್ಬಲ್ಯ ಅವರನ್ನು ಆ ರೀತಿ ಮಾಡಿಸುತ್ತದೆ. ಈ ಮಾನಸಿಕ ಖಾಯಿಲೆ ಯಾರನ್ನು ಸಹಾ ಬಿಟ್ಟಿಲ್ಲ ಎಲ್ಲರನ್ನು ಸಹಾ ಕಾಡುತ್ತದೆ. ಮಾನಸಿಕ ರೋಗಿಗಳನ್ನು ನರ ರೋಗಿಗಳೆಂದು ಪರಿಗಣಿಸಬೇಕಿದೆ. ಚಿಕಿತ್ಸೆಯನ್ನು ಪಡೆಯುವುದರ ಮೂಲಕ ಅವರು ಸಾಮಾನ್ಯ ಸ್ಥಿತಿಗೆ ಬರುತ್ತಾರೆ ಎಂದು ಮಂಜುನಾಥ್ ತಿಳಿಸಿದರು.

ರೋಟರಿ ಕ್ಲಬ್ ಚಿನ್ಮೂಲಾದ್ರಿಯ ಅಧ್ಯಕ್ಷರಾದ ಶಂಕರಪ್ಪ ಮಾತನಾಡಿ, ಮಾನಸಿಕ ರೋಗವನ್ನು ಚಿಕಿತ್ಸೆ ಪಡೆಯುವುದರ ಮೂಲಕ ಗುಣ ಪಡಿಸಬಹುದಾಗಿದೆ. ಇದರ ಬಗ್ಗೆ ಜನತೆಯಲ್ಲಿ ಜಾಗೃತಿಯನ್ನು ಮೂಡಿಸುವ ಅಗತ್ಯ ಇದೆ. ಇದು ಯಾವುದೇ ದೆವ್ವ-ಭೂತದಕಾಟವಲ್ಲನರಗಳದೌರ್ಬಲ್ಯದಿಂದ ಬರುವಂತ ಖಾಯಿಲೆಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ರೋಟರಿ ಕ್ಲಬ್ ಚಿನ್ಮೂಲಾದ್ರಿಯ ಕಾರ್ಯದರ್ಶಿ ಲಕ್ಷ್ಮೀಕಾಂತ, ಶ್ರೀಮತಿ ಗಾಯತ್ರಿ, ವೀಣಾ, ಶಿವರಾಂ, ಸೇರಿದಂತೆ ಇತರರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ವಾಲ್ಮೀಕಿ ಜಯಂತಿಯನ್ನು ಆಚರಣೆ ಮಾಡಲಾಯಿತು. ವಾಲ್ಮೀಕಿ ಭಾವ ಚಿತ್ರಕ್ಕೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದವರೆಲ್ಲಾ ಪುಷ್ಪ ನಮನವನ್ನು ಸಲ್ಲಿಸಿದರು.

## ಚನ್ನಗಿರಿ ಬಿಸಿಎಂ ಅಧಿಕಾರಿ ರವಿಕುಮಾರ್ ಅಥರ್ಗಾಗೆ ದೊಬೈ ದೊರೆಯಿಂದ ಅಂತಾರಾಷ್ಟ್ರೀಯ ಪ್ರಶಸ್ತಿ ಗೌರವ

» ಚನ್ನಗಿರಿ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕ್ ಅಧಿಕಾರಿ ರವಿಕುಮಾರ್ ಅಥರ್ಗಾ ಅವರಿಗೆ ದುಬೈನ ಅಲ್ ನಸ್ರ ಲೆಜೇಂಡ್ಸ ಹಾಲ್ ನಲ್ಲಿ ದುಬೈ ದೊರೆ ಶೇಖ್ ಜಬಾಲ್ ಬಿನ್ ಶಾದ್ ಅವರು ಅಂತಾರಾಷ್ಟ್ರೀಯ ಭಾರತ ಗೌರವ ಐಕಾನ್ ಅವಾರ್ಡ್ 2023ರ ಪ್ರಶಸ್ತಿ ನೀಡಿ ಅಭಿನಂದನೆ ಸಲ್ಲಿಸಿದರು.



ಭಾರತದ ದಾದಾ ಸಾಹೇಬ್ ಪಾಲ್ಕೆ ಐಕಾನ್ ಅವಾರ್ಡ್ ಫಿಲಂಸ್ ಆರ್ಗನೈಜೇಷನ್ ಆಯೋಜನೆ ಮಾಡಿದ್ದಂತ ಈ ಕಾರ್ಯಕ್ರಮದಲ್ಲಿ ರವಿಕುಮಾರ್ ಅಥರ್ಗಾ ಅವರನ್ನ ಸನ್ಮಾನಿಸಲಾಯಿತು.ದೇಶದಹಲವುರಾಜ್ಯಗಳಿಂದ ಬಂದ ಸಾಧಕರ ಸಾಲಿನಲ್ಲಿ ಕರ್ನಾಟಕದಿಂದ ಆಯ್ಕೆಯಾದ ರವಿಕುಮಾರ್ ಅಥರ್ಗಾ ಅವರು ಸಹ ಈ ಪ್ರಶಸ್ತಿಗೆ ಭಾಜನಾಗಿದ್ದರು.

ಇವರು ಕಳೆದ ಅಕ್ಟೋಬರ್ 22 ರಂದು ಬಿಜಾಪುರದಲ್ಲಿ ನಡೆದ ಕಾರ್ಯಕ್ರಮದಲ್ಲಿ 68 ಕನ್ನಡ ಮತ್ತು ಹಿಂದಿ ಹಾಡುಗಳನ್ನ ನಿರಂತರವಾಗಿ ಹಾಡು ಹೇಳುವ ಮೂಲಕ ದಾಖಲೆ ಬರೆದಿದ್ದಾರೆ. ಬಾಲಿವುಡ್ ನಟಿ ಶಾರ್ಲಿನ್ ಚೋಪ್ರಾ ಸೇರಿದಂತೆ ಹಲವು ಗಣ್ಯಾತಿ ಗಣ್ಯರು ಭಾಗವಹಿಸಿದ್ದರು. ರವಿಕುಮಾರ್ ಅಥರ್ಗಾ ಅವರು ಸರ್ಕಾರಿ ಅಧಿಕಾರಿಯಾದರು ಉತ್ತಮ ಸಂಗೀತಗಾರರು, ಯಾವುದೇ ಕಾರ್ಯಕ್ರಮ ಇರಲಿ ತಮ್ಮ ಪ್ರತಿಭೆ ಅನಾವರಣ ಮಾಡಿ ಜನಮನ ಗೆದ್ದಿದ್ದರು. ಸರ್ಕಾರಿ ಅಧಿಕಾರಿಯಾಗಿ ಉತ್ತಮವಾಗಿ ಕೆಲಸ ಮಾಡಿ ಜನರ ಪ್ರೀತಿಗೂ ಪಾತ್ರರಾಗಿದ್ದರು, ಸರ್ಕಾರದ ಕೆಲಸ ದೇವರ ಕೆಲಸ ಎಂದು ನಂಬಿರುವ ಇವರು ಬಿಡುವಿನ ವೇಳೆ ಹಾಡು ಹೇಳುವ ಅಭ್ಯಾಸ ಹೊಂದಿದ್ದು ನಿರಂತರವಾಗಿ 68 ಹಾಡುಗಳನ್ನ ಹೇಳಿ ಇಂಡಿಯಾ ಬುಕ್ ಆಫ್ ರೆಕಾ□□□□ಗೆ ಸೇರುವ ಪ್ರಕ್ರಿಯೆ ನಡೆಯುತ್ತಿದೆ.

ಈ ನಡುವೆ ಇವರ ಸಾಧನೆಗೆ 2023 ನೇ ಸಾಲಿನ ದಾದಾ ಸಾಹೇಬ್ ಪಾಲ್ಕೆ ಐಕಾನ್ ಅವಾರ್ಡ್ ಫಿಲಂಸ್ ಆರ್ಗನೈಜೇಷನ್ ನೀಡುವ ಅಂತಾರಾಷ್ಟ್ರೀಯ ಭಾರತ ಗೌರವ ಐಕಾನ್ ಅವಾರ್ಡ್ ನೀಡಿ ಅಭಿನಂದನೆ ಸಲ್ಲಿಸಲಾಗಿದೆ. ಕರ್ನಾಟಕದಿಂದ ಆಯ್ಕೆಯಾಗಿ ಸನ್ಮಾನಕ್ಕೆ ಪಾತ್ರರಾದ ರವಿಕುಮಾರ್ ಅಥರ್ಗಾ ಅವರಿಗೆ ಅವರ ಹಿತೈಷಿಗಳು, ಅಭಿಮಾನಿಗಳು ಸಹ ಶುಭ ಹಾರೈಸಿದ್ದಾರೆ.

## ಎಂಕಾಂ ಪದವಿಯಲ್ಲಿ ಚೈತನ್ಯ ಪ್ರಥಮ ರ್‍ಯಾಂಕ್: ಸನ್ಮಾನ



» ಚಿತ್ರದುರ್ಗ

ಎಂ.ಕಾಂ. ಪದವಿಯಲ್ಲಿ ಪ್ರಥಮ ರ್‍ಯಾಂಕ್ ಗಳಿಸಿ ಮೂರು ಚಿನ್ನದ ಪದಕ ಹಾಗೂ ಎರಡು ನಗದು ಬಹುಮಾನವನ್ನು ಮೈಸೂರು ವಿಶ್ವವಿದ್ಯಾನಿಲಯದ 103 ನೇ ಘಟಿಕೋತ್ಸವದಲ್ಲಿ ಕುಲಪತಿಗಳಿಂದ ಸ್ವೀಕರಿಸಿದ ಚಿತ್ರದುರ್ಗದ ಸಿ.ಎಂ.ಚೈತನ್ಯ ಇವರನ್ನು ಚಂದ್ರವಳ್ಳಿ ವಾಯುವಿಹಾರಿಗಳ ಬಳಗದಿಂದ ಸನ್ಮಾನಿಸಲಾಯಿತು.

ನಗರದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಮಹಿಳಾ ಕಾಲೇಜಿನ ವಾಣಿಜ್ಯಶಾಸ್ತ್ರ ಸಹ ಪ್ರಾಧ್ಯಾಪಕ ಡಾ.ಸಿ.ಚನ್ನಕೇಶವ ಹಾಗೂ ಮಾಳಪ್ಪನಹಟ್ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹ ಶಿಕ್ಷಕಿ ಪಿ.ಕೆ.ಮಂಜುಳಾ ಇವರ ಪುತ್ರಿ ಚೈತನ್ಯ 2019-20 ನೇ ಸಾಲಿನಲ್ಲಿ ಬಿ.ಕಾಂ. ಪದವಿಯಲ್ಲೂ ದಾವಣಗೆರೆ ವಿಶ್ವವಿದ್ಯಾನಿಲಯದಿಂದ ಪ್ರಥಮ ರ್‍ಯಾಂಕ್‌ನೊಂದಿಗೆ ಎರಡು ಚಿನ್ನದ ಪದಕ ಪಡೆದಿದ್ದರೆಂದು ಚಂದ್ರವಳ್ಳಿ ವಾಯುವಿಹಾರಿಗಳ ಬಳಗದವರು ಮೆಚ್ಚುಗೆ ವ್ಯಕ್ತಪಡಿಸಿದರು.

ಡಾ.ಸಿ.ಚನ್ನಕೇಶವ, ಫೈಲ್ವಾನ್ ತಿಪ್ಪೇಸ್ವಾಮಿ, ಮಹಮದಣ್ಣ, ಶಿಕ್ಷಕ ಕೆಂಚವೀರಪ್ಪ, ಚಿತ್ರಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುನೀತಮ್ಮ, ಡಾ.ಪ್ರಭಾಕರ್, ಎಸ್.ಎನ್.ರವಿಕುಮಾರ್, ಡಾ.ಸಂಜೀವಕುಮಾರ್‌ಪೋತೆ,ಷಣ್ಮುಖಪ್ಪ,ರಂಗಣ್ಣ,ವಿಜಯಕುಮಾರ್, ರಾಜು, ಮಂಜು, ನಿವೃತ್ತ ಮುಖ್ಯ ಶಿಕ್ಷಕ ಯಲ್ಲಪ್ಪರೆಡ್ಡಿ, ಪಾಪು ಸನ್ಮಾನ ಸಮಾರಂಭದಲ್ಲಿ ಹಾಜರಿದ್ದರು.

## ರಾಷ್ಟ್ರೀಯ ಏಕತಾ ದಿವಸ್: ಪ್ರತಿಜ್ಞಾವಿಧಿ ಬೋಧನೆ

» ಚಿತ್ರದುರ್ಗ

ರಾಷ್ಟ್ರೀಯ ಏಕತಾ ದಿವಸ್ ಪ್ರಯುಕ್ತ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಸ್.ಜೆ. ಸೋಮಶೇಖರ್ ಅವರು ಪ್ರತಿಜ್ಞಾವಿಧಿ ಬೋಧಿಸಿದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ರಾಷ್ಟ್ರೀಯ ಏಕತಾ ದಿವಸ್ ಪ್ರತಿಜ್ಞೆ ಮತ್ತು ಸರ್ಧಾರ್ ವಲ್ಲಭಾಯ್ ಪಟೇಲ್ ಅವರ ಜನ್ಮದಿನಾಚರಣೆ ಪ್ರಯುಕ್ತ ಪ್ರತಿಜ್ಞಾವಿಧಿ ಬೋಧಿಸಿ, ಭಾರತದ ಏಕೀಕರಣ ಕಾರ್ಯದಲ್ಲಿ ಸರ್ದಾರ್ ವಲ್ಲಭಾಯ್ ಪಟೇಲ್ ಅವರು ಕಾರ್ಯ ಮತ್ತು ಶ್ರಮದ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾ ಅಧಿಕಾರಿಗಳು, ಯೋಜನಾ ನಿರ್ದೇಶಕರು, ಉಪ ಕಾರ್ಯದರ್ಶಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ ಸಿಬ್ಬಂದಿ ವರ್ಗದವರು ಇದ್ದರು.



## ಜಿಟಿಟಿಸಿಯಲ್ಲಿ ಕೌಶಲ್ಯ ತರಬೇತಿಗಳು

**ಹಾವೇರಿ:** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಎಸ್‌ಸಿಪಿ-ಟಿಎಸ್‌ಪಿ ಯೋಜನೆ ಅಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ, ಯುವತಿಯರಿಗೆ ಉದ್ಯೋಗ ಅವಕಾಶಗಳನ್ನು ಕಲ್ಪಿಸುವ ಸಲುವಾಗಿ ಹಾನಗಲ್ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ)ಯಲ್ಲಿ ಉಚಿತ ತಾಂತ್ರಿಕ ಕೌಶಲ್ಯ ತರಬೇತಿಗಳನ್ನು ಆಯೋಜಿಸಲಾಗಿದೆ.

## ಪ್ರಮುಖ ಸುದ್ದಿ

### ರೇಬಿಸ್ ಲಸಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್

# ರೇಬಿಸ್ ರೋಗ ಗುಣಪಡಿಸಲಾಗದು, ತಡೆಗಟ್ಟಲು ಸಾಧ್ಯ

» ಚಿತ್ರದುರ್ಗ

ರೇಬಿಸ್ ರೋಗ ಗುಣಪಡಿಸಲಾಗದು, ತಡೆಗಟ್ಟಲು ಸಾಧ. ನಿರ್ಲಕ್ಷೆ ವಹಿಸದಿರಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಹೇಳಿದರು.

ನಗರದ ಪಶುಪಾಲನಾ ಇಲಾಖೆಯಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರೇಬಿಸ್ ಲಸಿಕೆ ಹಾಕುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಮುಖ್ಯವಾಗಿ ರೇಬಿ ಸೋಂಕು ಪ್ರಾಣಿಗಳ ಕಡಿತದಿಂದ ರೋಗಾಣು ಇರುವ ಜಲ್ಲು ಸಂಪರ್ಕದಿಂದ ವೈರಾಣು ಗಾಯದ ಮುಖಾಂತರ ದೇಹ ಪ್ರವೇಶಿಸಿ ರೇಬಿಸ್ ರೋಗ ಉಂಟುಮಾಡುತ್ತದೆ. ನಾಯಿ, ಬೆಕ್ಕು, ಹಸು, ಎಮ್ಮೆ, ಕುರಿ, ಮೇಕೆ, ಕೋತಿ, ತೋಳ, ನರಿ ಮುಂಗುಸಿ, ಕುದುರೆ, ಬಾವಲಿ, ಇಲಿ ಹಾಗೂ ಇತ್ಯಾದಿ ಪ್ರಾಣಿಗಳು ಕಚ್ಚಿದಾಗ ನಕ್ಕಿದಾಗ ಹರಡುತ್ತದೆ. ಭಾರತದಲ್ಲಿ ಬಹುತೇಕ ಜನರಿಗೆ ಹುಚ್ಚು ನಾಯಿ ಕಡಿತದಿಂದಲೇ ಶೇ.97 ರಷ್ಟು ರೇಬಿಸ್ ರೋಗ ಬರುತ್ತದೆ. ಪ್ರಾಣಿಗಳ ನಿಕಟ ಸಂಪರ್ಕ ಹೊಂದಿದವರು ಹೆಚ್ಚಾಗಿ ಪಶುಪಾಲನ ಇಲಾಖೆಯಲ್ಲಿ ಕರ್ತವ್ಯ ನಿರತರಾಗಿರುತ್ತಾರೆ. ಇವರ ರಕ್ಷಣೆಗಾಗಿ ಮುಂಜಾಗ್ರತಾ ಕ್ರಮಕ್ಕಾಗಿ ರೇಬಿಸ್ ಲಸಿಕೆ ನೀಡಲಾಗುತ್ತಿದೆ. ಪಶುಪಾಲನಾ ಇಲಾಖೆಯ ಸಿಬ್ಬಂದಿಗಳು ಇದರ ಸುದುಪಯೋಗ ಪಡೆದುಕೊಳ್ಳಬೇಕು ಎಂದರು.

ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಪ್ರಾಣಿ ಕಡಿತಕ್ಕೆ ಒಳಗಾಗುವ ಮುನ್ನ ರೇಬಿಸ್ ಲಸಿಕೆಯನ್ನ ಒಂದನೇ ದಿನ, ಏಳನೇ ದಿನ ಮತ್ತು 21 ಅಥವಾ 28ನೇ ದಿನಗಳಂದು ಮೂರು ವರಸೆ ಲಸಿಕೆ ಪಡೆದುಕೊಳ್ಳಬೇಕು. ಪ್ರಾಣಿಗಳ ಕಡಿತಕ್ಕೆ ಒಳಗಾದ ನಂತರ ಒಂದನೇ ದಿನ ಮೂರನೇ ದಿನ ಏಳನೇ ದಿನ ಮತ್ತು 21ನೇ ದಿನ ತಪ್ಪದೇ ಐದು ವರಸೆ ಪಡೆದುಕೊಳ್ಳಬೇಕು.

ಲಸಿಕೆ ನೀಡುವ ಮಾರ್ಗ, ಲಸಿಕೆ ನೀಡುವ ಪ್ರಮಾಣ ಲಸಿಕೆ ಪಡೆದುಕೊಳ್ಳುವ ಬಗೆ ಕುರಿತು ತಿಳಿಸಿದರು.ಪಾಲಿಕ್ಲಿನಿಕ್ ಉಪನಿರ್ದೇಶಕ ಡಾ.ಕುಮಾರ್ ಅವರು ಸಾಂಕೇತಿಕವಾಗಿ ಲಸಿಕೆ ಪಡೆದುಕೊಂಡರು. ಪಶುಪಾಲನಾ ಇಲಾಖೆ ಉಪನಿರ್ದೇಶಕ ಉಪನಿರ್ದೇಶಕ ಡಾ.ಬಾಬುರತ್ನ, ಮುಖ್ಯ ಆರೋಗ್ಯ ಮೇಲ್ವಿಚಾರಣ ಅಧಿಕಾರಿ ಎಂ.ಬಿ.ಹನುಮಂತ್ಪ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಗೋಪಾಲ್ ಕೃಷ್ಣ, ಆರೋಗ್ಯ ಸುರಕ್ಷತಾಧಿಕಾರಿ ವನಜಾಕ್ಷಮ್ಮ, ಅರುಂದತಿ, ಮಂಜು, ಆಶಾ ಕಾರ್ಯಕರ್ತೆಯರು, ಪಶುಪಾಲನಾ ಇಲಾಖೆ ಸಿಬ್ಬಂದಿಗಳು ಇದ್ದರು. ಕಾರ್ಯಕ್ರಮದಲ್ಲಿ 150 ಪಶುಪಾಲನಾ ಇಲಾಖೆಯ ಸಿಬ್ಬಂದಿಗಳಿಗೆ ಲಸಿಕೆ ನೀಡಲಾಯಿತು.

## ಫಾಸ್ಟ್ ನ್ಯೂಸ್

### ನಗದು ಪುರಸ್ಕಾರಕ್ಕೆ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

2021 ಮತ್ತು 2022ನೇ ಸಾಲಿನ ರಾಷ್ಟ್ರ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ಅರ್ಹ ಕ್ರೀಡಾಪಟುಗಳಿಂದ ನಗದು ಪುರಸ್ಕಾರವನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ನ.20 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ವಿವರಗಳಿಗೆ ದೂ.ಸಂ: 08192–237480 ಸಂಪರ್ಕಿಸಲು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ಜಿಲ್ಲಾ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವ ಸುವರ್ಣ ಕರ್ನಾಟಕ ಸ್ತಬ್ದಚಿತ್ರ

» ದಾವಣಗೆರೆ

ದಾವಣಗೆರೆ ಜಿಲ್ಲಾಡಳಿತದಿಂದ ಸುವರ್ಣ ಕರ್ನಾಟಕ ವಿಶೇಷ ಸ್ತಬ್ಧಚಿತ್ರವು ಈ ಬಾರಿ ರಾಜ್ಯೋತ್ಸವ ವಿಶೇಷವಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆ ಆಶ್ರಯದಲ್ಲಿ ಸ್ತಬ್ದ ಚಿತ್ರವನ್ನು ನಿರ್ಮಿಸಲಾಗಿದೆ. ಸ್ತಬ್ದಚಿತ್ರವನ್ನು ದಾವಣಗೆರೆ ಚಿತ್ರಕಲಾ ಪರಿಷತ್(ರಿ) ಮಾರ್ಗದರ್ಶನದಲ್ಲಿ ಕಲಾವಿದರಾದ ಡಿ. ಶೇಷಾಚಲ, ಚಂದ್ರಶೇಖರ ಸಂಗ ಹಾಗೂ ಶಿವಕುಮಾರ್ ಅವರು ಸ್ತಬ್ಧಚಿತ್ರ ನಿರ್ಮಾಣ ಮಾಡಿದ್ದಾರೆ. ಚಲಿಸುವ ವಾಹನವನ್ನು ವೇದಿಕೆಯಾಗಿಸಿ ಅದರಲ್ಲಿ ಕುಳಿತಿರುವ ತಾಯಿ ಭುವನೇಶ್ವರಿ, ಎದುರಿನಲ್ಲಿ ವೃತ್ತಾಕಾರದಲ್ಲಿ ಸುತ್ತುವ ಅಷ್ಟಭುಜಕ್ಕೆ ಎಂಟು ಜ್ಞಾನಪೀಠ ವಿಜೇತ ಸಾಹಿತಿಗಳನ್ನು ಜೋಡಿಸಲಾಗಿದೆ. ಇದರ ಮೇಲಿರುವ ಗೋಪುರದಲ್ಲಿ ಕನ್ನಡ ಧ್ವಜ ರಾರಾಜಿಸುತ್ತದೆ. ವಾಹನಕ್ಕೆ ದಾವಣಗೆರೆ ಜಿಲ್ಲೆಯ ಪ್ರಮುಖ ಪ್ರವಾಸಿ ಸ್ಥಳಗಳ ಚಿತ್ರಗಳನ್ನು ಜೋಡಿಸಲಾಗಿದೆ. ಸ್ತಬ್ಧಚಿತ್ರದಲ್ಲಿ ಭುವನೇಶ್ವರಿ ರೂಪದರ್ಶಿಯಾಗಿ ದವನ ವಾಣಿಜ್ಯ ಕಾಲೇಜಿನ ಪಿಯು ವಿದ್ಯಾರ್ಥಿನಿ ಜಿವಿಕಾ ಜಿಎಂ ಗಮನ ಸೆಳೆಯುವರು. ಮೊಟ್ಟ ಮೊದಲ ಬಾರಿಗೆ ಸುವರ್ಣ ಕರ್ನಾಟಕ ವಿಶೇಷವಾಗಿ ಸ್ತಬ್ಧಚಿತ್ರಕ್ಕೆ ನಿರ್ಧಾರ ಮಾಡಲಾಯಿತು ಎಂದು ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಇಟ್ನಾಳ್ ತಿಳಿಸಿದ್ದಾರೆ.

### ದಹನಕಾರಿ ವಸ್ತುಗಳನ್ನು ಸಾಗಿಸದಂತೆ ಜಾಗೃತಿ

» ಶಿವಮೊಗ್ಗ

ದೀಪಾವಳಿ ಹಬ್ಬ, ಹರಿದಿನಗಳು ಮತ್ತು ಇತ್ತೀಚಿನ ಅಗ್ನಿ ಅವಘಡಗಳನ್ನು ಗಮನದಲ್ಲಿಟ್ಟುಕೊಂಡು ರೈಲ್ವೆ ಮಂಡಳಿ, ನವದೆಹಲಿ ಮತ್ತು ಆರ್‌ಪಿಎಫ್ ಹೆಡ್ ಕ್ವಾಟರ್ಸ್‌ನ ನಿರ್ದೇಶನದಂತೆ ದಹಿಸುವ ವಸ್ತುಗಳನ್ನು ಸಾಗಿಸುವುದರ ವಿರುದ್ಧ ವಿಶೇಷ ಡ್ರೈವ್ ಮತ್ತು ಸಾಮಾನ್ಯ ಜಾಗೃತಿಯನ್ನು ಇಂದು ಶಿವಮೊಗ್ಗ ರೈಲ್ವೆ ಸ್ಟೇಷನ್‌ನಲ್ಲಿ ಪೋಸ್ಟ್ ಕಮಾಂಡರ್, ರೈಲ್ವೆ ಪ್ರೋಟೆಕ್ಷನ್ ಫೋರ್ಸ್, ಶಿವಮೊಗ್ಗ ಇವರ ವತಿಯಿಂದ ಆಯೋಜಿಸಲಾಗಿದೆ.ರೈಲುಗಳಲ್ಲಿ ಅಥವಾ ರೈಲ್ವೆ ಆವರಣದಲ್ಲಿ ಯಾವುದೇ ದಹನಕಾರಿ ವಸ್ತುಗಳು, ಪಟಾಕಿಗಳನ್ನು ಕೊಂಡೊಯ್ಯದಂತೆ ತಿಳಿವಳಿಕೆ ಮೂಡಿಸುವ ಮೂಲಕ ರೈಲು ನಿಲ್ದಾಣ ಮತ್ತು ರೈಲುಗಳಲ್ಲಿ ಪ್ರಯಾಣಿಕರಿಗೆ ಅರಿವು ಮೂಡಿಸಲಾಯಿತು. ರೈಲುಗಳಲ್ಲಿ ಪಟಾಕಿ , ಸಿಲೆಂಡರ್ ಗ್ಯಾಸ್ ಇತರೆ ದಹನಕಾರಿ ವಸ್ತುಗಳನ್ನು ಸಾಗಿಸುವುದು ಕಂಡು ಬಂದರೆ ರೈಲ್ವೆ ಕಾಯ್ದೆ 164 ವಿಧಿಯ ಪ್ರಕಾರ 3 ವರ್ಷ ಜೈಲು ಶಿಕ್ಷೆ ಅಥವಾ ರೂ.1000 ದವರೆಗೆ ದಂಡ ಅಥವಾ ಎರಡನ್ನೂ ವಿಧಿಸಲಾಗುವುದು ಎಂದು ಎಚ್ಚರಿಕೆ ನೀಡಲಾಯಿತು. ಈ ವೇಳೆ ಆರ್‌ಪಿಎಫ್ ಇನ್ಸ್‌ಪೆಕ್ಟರ್ ಬಿ ಎನ್ ಕುಬೇರಪ್ಪ, ಸಬ್ ಇನ್ಸ್‌ಪೆಕ್ಟರ್ ಸಂತೋಷ್ ಗಾಂವ್ಕರ್ ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

### ಕಿರು ಚಿತ್ರಗಳ ಪ್ರದರ್ಶನ

» ಶಿವಮೊಗ್ಗ

ಸತ್ಯ ಪಿಕ್ಚರ್ಸ್ ಮತ್ತು ಸತ್ಯ ಹೆಗಡೆ ಸ್ಟುಡಿಯೋಸ್ ಸಹಯೋಗದಲ್ಲಿ ನಡೆಯಲಿರುವ ನ. 01ರ ಬುಧವಾರ ಬೆಳಿಗ್ಗೆ 10.30ಕ್ಕೆ ಲಕ್ಷ್ಮಿ ಗ್ಯಾಲಕ್ಸಿಯ ಸ್ಟೈಲ್ ಡ್ಯಾನ್ಸ್ ಕ್ರೂವ್ ಸಭಾಂಗಣದಲ್ಲಿ ಶಾರ್ಟ್ ಅಂಡ್ ಸ್ವೀಟ್ ಕಿರುಚಿತ್ರ ಪ್ರದರ್ಶನ ಮತ್ತು ಸಂವಾದ ನಡೆಯಲಿದೆ. ಕಾರ್ಯಕ್ರಮದಲ್ಲಿ ಆಕಾಶ ಲಹರಿ ಮತ್ತು ಸೋಲೋ ಕಿರುಚಿತ್ರಗಳು ಪ್ರದರ್ಶನಗೊಳ್ಳಲಿದ್ದು, ಎಸ್ ಸಿನೆಮ್ಯಾಟೋಗ್ರಾಫರ್ ಸತ್ಯ ಹೆಗಡೆ, ಕಲ್ಟ್ ಕ್ಲಾಸಿಕ್ ಫಿಲಂ ಮೇಕರ್ ಡಿ. ಸತ್ಯ ಪ್ರಕಾಶ್, ಸೆನ್ಸಿಬಲ್ ಡೈರೆಕ್ಟರ್ ಮಂಸೋರೆ ಮತ್ತು ಪ್ಯಾಶನೇಟ್ ಡೈರೆಕ್ಟರ್ ದೀಪಕ್ ಮಧುವನಹಳ್ಳಿ ಪಾಲ್ಗೊಳ್ಳಲಿದ್ದಾರೆ. ಚಲನಚಿತ್ರ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಸತ್ಯ ಪಿಕ್ಚರ್ಸ್ ಮತ್ತು ಸತ್ಯ ಹೆಗ್ಡೆ ಸ್ಟುಡಿಯೋಸ್ ಕೋರಿದೆ. ವಿವರಗಳಿಗೆ 90609 77694ರಲ್ಲಿ ಸಂಪರ್ಕಿಸಿ.

## ಕರ್ನಾಟಕಕ್ಕೆ 50 ವರ್ಷಗಳ ಸಂಭ್ರಮಾಚರಣೆ

# ರಾಜ್ಯೋತ್ಸವ: ವಿಜೃಂಭಣೆ ಆಚರಣೆಗೆ ಸಕಲ ಸಿದ್ಧತೆ

» ಚಿತ್ರದುರ್ಗ



ಮೈಸೂರು ರಾಜ್ಯ ಕರ್ನಾಟಕ ಎಂದು ನಾಮಕರಣವಾಗಿ ನವೆಂಬರ್ 01 ಕ್ಕೆ 50 ವರ್ಷ ಪೂರ್ಣಗೊಳ್ಳಲಿದೆ. ಹೀಗಾಗಿ ಈ ಬಾರಿಯ ಕನ್ನಡ ರಾಜ್ಯೋತ್ಸವವನ್ನು ನವೆಂಬರ್ 01 ರಂದು ಹೆಚ್ಚು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಜಿಲ್ಲಾಡಳಿತದ ವತಿಯಿಂದ ಸಕಲ ಸಿದ್ಧತೆಗಳು ನಡೆದಿದೆ.

ಕರ್ನಾಟಕ 50 ವರ್ಷಗಳ ಸಂಭ್ರಮ ಆಚರಿಸುತ್ತಿರುವುದರಿಂದ ಈ ಬಾರಿಯ ಕನ್ನಡ ರಾಜ್ಯೋತ್ಸವ ಆಚರಣೆಗೆ ವಿಶೇಷ ಮೆರುಗು ಬಂದಿದೆ. ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ರಾಜ್ಯೋತ್ಸವ ಸಮಾರಂಭ ಆಚರಣೆಗೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ವೇದಿಕೆಯು ಹಳದಿ ಮತ್ತು ಕೆಂಪು ಬಣ್ಣದ ಬಗೆ ಬಗೆಯ ವಿನ್ಯಾಸದಿಂದ ಅಲಂಕೃತಗೊಂಡಿದ್ದು, ಇಡೀ ಮೈದಾನದಲ್ಲಿ ಕನ್ನಡ ಬಾವುಟ, ಕನ್ನಡ ನಾಡು ನುಡಿ ಬಿಂಬಿಸುವ ರೀತಿ ಮೈದಾನ ಸಜ್ಜುಗೊಂಡಿದ್ದು ಹಬ್ಬದ ವಾತಾವರಣ ನಿರ್ಮಾಣಗೊಂಡಿದೆ.

ಜಿಲ್ಲಾ ಮಟ್ಟದಲ್ಲಿ ಕನ್ನಡ ರಾಜ್ಯೋತ್ಸವ ಅಂಗವಾಗಿ ಅಂದು ಬೆಳಿಗ್ಗೆ 7.30 ಕ್ಕೆ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರದ ಮೆರವಣಿಗೆಯು ನಗರದ ನೀಲಕಂಠೇಶ್ವರ ದೇಗುಲದಿಂದ ಪ್ರಾರಂಭವಾಗಲಿದೆ. ಮೆರವಣಿಗೆಯಲ್ಲಿ ನಮ್ಮ ನಾಡು, ನುಡಿ, ಸಂಸ್ಕೃತಿ ಬಿಂಬಿಸುವ ವಿವಿಧ ವೈವಿಧ್ಯಮಯ ಜಾನಪದ ಕಲಾತಂಡಗಳು ಪಾಲ್ಗೊಳ್ಳಲಿದ್ದು, ಸಾರ್ವಜನಿಕರು, ಅಧಿಕಾರಿಗಳು, ಶಾಲಾ–ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.

ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವ ವಿವಿಧ ಇಲಾಖೆಗಳ ಸ್ತಬ್ಧಚಿತ್ರಗಳು ಪಾಲ್ಗೊಳ್ಳಲಿವೆ. ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ, ಆರೋಗ್ಯ ಇಲಾಖೆ, ಜಿಲ್ಲಾ ಪಂಚಾಯಿತಿ, ಭದ್ರಾ ಮೇಲ್ದಂಡೆ ಯೋಜನೆ, ಸರ್ಕಾರದ ಗ್ಯಾರಂಟಿ ಯೋಜನೆಗಳ ಸ್ತಬ್ಧಚಿತ್ರಗಳು, ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸರ್ಕಾರದ ಯೋಜನೆಗಳನ್ನು ಸ್ತಬ್ಧಚಿತ್ರಗಳ ಮೂಲಕ ಸಾರ್ವಜನಿಕರಿಗೆ ತಲುಪಿಸಲಾಗುವುದು. ಮೆರವಣಿಗೆಯು ನಗರದ ನೀಲಕಂಠೇಶ್ವರದ ದೇಗುಲದಿಂದ ಹೊರಟು, ಪ್ರಮುಖ ರಸ್ತೆ ಮೂಲಕ ರಾಜ್ಯೋತ್ಸವ ಸಮಾರಂಭ ಜರುಗುವ ಪೊಲೀಸ್ ಕವಾಯತು ಮೈದಾನದವರೆಗೆ ಸಾಗಿ ಬರಲಿದೆ.

ಅಂದು ಬೆಳಿಗ್ಗೆ 9ಕ್ಕೆ ಪೊಲೀಸ್ ಕವಾಯತು ಮೈದಾನದಲ್ಲಿ ರಾಜ್ಯೋತ್ಸವ ಸಮಾರಂಭದ ಅಂಗವಾಗಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ, ರಾಷ್ಟ್ರಧ್ವಜಾರೋಹಣ, ರಾಷ್ಟ್ರಗೀತೆ ಮತ್ತು ನಾಡಗೀತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ರಾಜ್ಯೋತ್ಸವ ಸಂದೇಶ ನೀಡುವರು.ಕನ್ನಡಾಂಬೆಗೆ ನುಡಿ ನಮನ: ಕರ್ನಾಟಕಕ್ಕೆ 50 ರ ಸಂಭ್ರಮಾಚರಣೆ ಹಿನ್ನೆಲೆಯಲ್ಲಿ ಈ ಬಾರಿ ವಿಶೇಷವಾಗಿ ಈ ನಾಡಿನ ಹೆಸರಾಂತ 05 ಕವಿಗಳು ರಚಿಸಿರುವ ಗೀತೆಗಳನ್ನು ರಾಜ್ಯೋತ್ಸವ ಸಮಾರಂಭದಲ್ಲಿ ಕಡ್ಡಾಯವಾಗಿ ಹಾಡುವ ಮೂಲಕ ನುಡಿ ನಮನ ಸಲ್ಲಿಸಲು ರಾಜ್ಯ ಸರ್ಕಾರ ನಿರ್ದೇಶನ ನೀಡಿದೆ. ಇದರನ್ವಯ ಹುಯಿಲಗೋಳ ನಾರಾಯಣರಾಯರು ರಚಿಸಿರುವ "ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು", ಕುವೆಂಪು ರಚಿತ "ಎಲ್ಲಾದರು ಇರು ಎಂತಾದರು ಇರು", ದ.ರಾ.ಬೇಂದ್ರ ರಚಿಸಿರುವ "ಒಂದೇ ಒಂದೇ ಕರ್ನಾಟಕ ಒಂದೇ", ಸಿದ್ದಯ್ಯ ಪುರಾಣಿಕರು ರಚಿಸಿರುವ "ಹೊತ್ತಿತೋ ಹೊತ್ತಿತು ಕನ್ನಡದ ದೀಪ", ಹಾಗೂ ಚನ್ನವೀರ ಕಣವಿ ಅವರು ಬರೆದಿರುವ "ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ" ಎಂಬ 05 ಗೀತೆಗಳನ್ನು ಗೀತ ಗಾಯನ ತಂಡವು ಪ್ರಸ್ತುತ ಪಡಿಸಲಿದೆ. ಇದೇ ರೀತಿ, ಜಿಲ್ಲೆಯ ಎಲ್ಲೆಡೆಯೂ ಕನ್ನಡ ರಾಜ್ಯೋತ್ಸವ ಆಚರಣೆ ಸಂದರ್ಭದಲ್ಲಿ 05 ಗೀತೆಗಳನ್ನು ಕಡ್ಡಾಯವಾಗಿ ಹಾಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಸಮಾರಂಭದಲ್ಲಿ ಸಾಹಿತ್ಯ, ಸಂಗೀತ, ಕಲೆ (ರಂಗಭೂಮಿ), ಜಾನಪದ, ಸಮಾಜ ಸೇವೆ, ಪರಿಸರ ಸಂರಕ್ಷಣೆ, ಕೃಷಿ, ಕ್ರೀಡೆ, ವಿಜ್ಞಾನ ತಂತ್ರಜ್ಞಾನ ಸಂಶೋಧನೆ, ವೈದ್ಯಕೀಯ, ವಿಶೇಷಚೇತನರ ಕ್ರೀಡೆ, ಚಿತ್ರಕಲೆ, ಪತ್ರಿಕೋದ್ಯಮ, ಛಾಯಾಗ್ರಹಣ ಕ್ಷೇತ್ರಗಳಲ್ಲಿ ಉತ್ತಮ ಹಾಗೂ ಗಣನೀಯ ಸೇವೆ, ಸಾಧನೆಗೈದ ಸಾಧಕರಿಗೆ ಸನ್ಮಾನ ನಡೆಯಲಿದೆ.

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವ ಎ. ನಾರಾಯಣಸ್ವಾಮಿ ಘನ ಉಪಸ್ಥಿತಿ ವಹಿಸುವವರು. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ರಾಷ್ಟ್ರ ಧ್ವಜಾರೋಹಣ ಮತ್ತು ರಾಜ್ಯೋತ್ಸವ ಸಂದೇಶ ನೀಡುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು.ಗೌರವನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಮುಖ್ಯ ಅತಿಥಿಗಳಾಗಿ ಶಾಸಕರಾದ ಟಿ.ರಘುಮೂರ್ತಿ, ಎನ್. ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ಬಿ.ಜಿ. ಗೋವಿಂದಪ್ಪ, ವಿಧಾನ ಪರಿಷತ್ ಸದಸ್ಯರಾದಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್ ಪಾಲ್ಗೊಳ್ಳಲಿದ್ದಾರೆ.

ಜಿಲ್ಲಾಡಳಿತ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆ, ನಗರಸಭೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ಅಂದು ಸಂಜೆ 6ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ವಿಶಿಷ್ಟ ರೀತಿಯಲ್ಲಿ ಆಚರಿಸಲು ಮನವಿ: ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣವಾಗಿ 50 ವರ್ಷಗಳು ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ ಈ ವರ್ಷದ ಕನ್ನಡ ರಾಜ್ಯೋತ್ಸವವನ್ನು ವಿಶೇಷ ರೀತಿಯಲ್ಲಿ ಆಚರಿಸಲಾಗುತ್ತಿದ್ದು, ಸಾರ್ವಜನಿಕರು ಮನೆಗಳ ಮುಂದೆ ರಂಗೋಲಿ ಹಾಕಿ, ಗಾಳಿಪಟಗಳನ್ನು ಹಾರಿಸಿ, ಹಣತೆ ಹಚ್ಚುವ ಮೂಲಕ ಕನ್ನಡ ಜ್ಯೋತಿ ಬೆಳಗಿಸುವುದರೊಂದಿಗೆ ರಾಜ್ಯೋತ್ಸವ ಸಂಭ್ರಮ ಹೆಚ್ಚಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮನವಿ ಮಾಡಿದ್ದಾರೆ.

ಕರ್ನಾಟಕ ಸಂಭ್ರಮ–50 ರ ಅಂಗವಾಗಿ ನವೆಂಬರ್ 01 ರಂದು ಸಂಭ್ರಮದಲ್ಲಿ ಎಲ್ಲ ಸಾರ್ವಜನಿಕರೂ ತೊಡಗಿಸಿಕೊಳ್ಳಬೇಕು ಎಂಬ ಸದುದ್ದೇಶದಿಂದ ಸರ್ಕಾರ ಅಂದಿನ ದಿನದಂದು ವೈವಿಧ್ಯಮಯ ಚಟುವಟಿಕೆಗಳ ಮೂಲಕ ಕನ್ನಡ ರಾಜ್ಯೋತ್ಸವ ಆಚರಣೆ ನಡೆಯುವಂತಾಗಲು ಹಲವು ನಿರ್ದೇಶನಗಳನ್ನು ನೀಡಿದೆ. ಅದರನ್ವಯ ಈ ಬಾರಿಯ ರಾಜ್ಯೋತ್ಸವವನ್ನು ವಿಶಿಷ್ಟ ರೀತಿಯಲ್ಲಿ ನವೆಂಬರ್ 01 ರಂದು ಜಿಲ್ಲೆಯ ಎಲ್ಲರೂ ತಮ್ಮ ಮನೆಗಳ ಮುಂದೆ ಕೆಂಪು ಮತ್ತು ಹಳದಿ ಬಣ್ಣದ ರಂಗೋಲಿಗಳನ್ನು ಬಿಡಿಸಿ ಕರ್ನಾಟಕ ಸಂಭ್ರಮ–50 "ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ" ಎಂಬ ಘೋಷವಾಕ್ಯ ಬರೆಯುವಂತೆ ಅವರು ವಿನಂತಿಸಿದ್ದಾರೆ.

ನವೆಂಬರ್ 01 ರಂದು ಬೆಳಿಗ್ಗೆ 9 ಗಂಟೆಗೆ ರಾಜ್ಯದ ಎಲ್ಲ ಆಕಾಶವಾಣಿ ಕೇಂದ್ರಗಳಿಂದ (ರೇಡಿಯೋ) ನಾಡಗೀತೆಯನ್ನು ಪ್ರಸಾರ ಮಾಡಲಾಗುವುದು. ಆ ಸಮಯದಲ್ಲಿ ಜಿಲ್ಲೆಯ ಎಲ್ಲಾ ನಾಗರಿಕರು ನಾಡಗೀತೆ ಪ್ರಸಾರವಾಗುವ ಸಂದರ್ಭದಲ್ಲಿ ಎದ್ದು ನಿಂತು ಗೌರವ ಸಲ್ಲಿಸಬೇಕು. ಅದೇ ದಿನ ಸಂಜೆ 5 ಗಂಟೆಗೆ ಜಿಲ್ಲೆಯ ಎಲ್ಲ ಗ್ರಾಮಗಳ ಮೈದಾನಗಳಲ್ಲಿ ಕೆಂಪು ಹಳದಿ ಬಣ್ಣದ ಗಾಳಿಪಟಗಳನ್ನು ಆಕಾಶಕ್ಕೆ ಹಾರಿ ಬಿಡುವ ಮೂಲಕ ಸಂಭ್ರಮದ ಗಾಳಿಪಟ ಉತ್ಸವ ಆಚರಿಸಬೇಕು. ಅದೇ ರೀತಿ ನವೆಂಬರ್ 01 ರ ಸಂಜೆ 7 ಗಂಟೆಗೆ ಜಿಲ್ಲೆಯ ಎಲ್ಲೆಡೆ ಮನೆಗಳ ಮುಂದೆ, ಕಚೇರಿಗಳು ಹಾಗೂ ಅಂಗಡಿ–ಮಳಿಗೆಗಳ ಮುಂದೆ ಹಣತೆ (ದೀಪ) ಹಚ್ಚುವ ಮೂಲಕ ಕನ್ನಡ ಜ್ಯೋತಿ ಬೆಳಗಬೇಕು. ಜಿಲ್ಲೆಯ ಎಲ್ಲ ನಾಗರಿಕರು, ಸಂಘ–ಸಂಸ್ಥೆಗಳು ರಂಗೋಲಿ, ಗಾಳಿಪಟ ಉತ್ಸವ ಹಾಗೂ ಕನ್ನಡಜ್ಯೋತಿ ಬೆಳಗುವ ಮೂಲಕ ರಾಜ್ಯೋತ್ಸವದ ಸಂಭ್ರಮದಲ್ಲಿ ಭಾಗವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಜಿಲ್ಲೆಯ ನಾಗರಿಕರಲ್ಲಿ ಮನವಿ ಮಾಡಿದ್ದಾರೆ.

ಕಡ್ಡಾಯವಾಗಿ ಭಾಗವಹಿಸಲು ಸೂಚನೆ: ಕನ್ನಡ ರಾಜ್ಯೋತ್ಸವದ ಅಂಗವಾಗಿ ಬೆಳಿಗ್ಗೆ 9 ಗಂಟೆಗೆ ನಗರದ ಪೊಲೀಸ್ ಕವಾಯತು ಮೈದಾನದಲ್ಲಿ ಜರುಗುವ ಕಾರ್ಯಕ್ರಮ ಹಾಗೂ ಸಂಜೆ 05 ಗಂಟೆಗೆ ತ.ರಾ.ಸು. ರಂಗಮಂದಿರದಲ್ಲಿ ಜರುಗುವ ಕಾರ್ಯಕ್ರಮಗಳಲ್ಲಿ ಎಲ್ಲ ಸರ್ಕಾರಿ ಅಧಿಕಾರಿಗಳು, ನೌಕರರು ಗೈರು ಹಾಜರಾಗದಂತೆ ತಪ್ಪದೇ ಭಾಗವಹಿಸಬೇಕು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

## ಗ್ರಾಮೀಣ ಪ್ರದೇಶದಲ್ಲೂ ಸಹ ಗ್ರಂಥಾಲಯಗಳ ಸದುಪಯೋಗವನ್ನು ಹೆಚ್ಚು ಪಡೆದುಕೊಳ್ಳಲು ಗ್ರಾಮಸ್ಥರು ಮುಂದಾಗಬೇಕು: ತಿಪ್ಪೇಸ್ವಾಮಿ

» ಚಳ್ಳಕೆರೆ

ನಗರದ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶ್ರೀಕೃಷ್ಣರಾಜೇಂದ್ರ ಗ್ರಂಥಾಲಯ ಇಂದು ಗ್ರಾಮೀಣ ಭಾಗಗಳಲ್ಲೂ ಸಹ ಉತ್ತಮ ಕಾರ್ಯದಿಂದ ಜನರ ಮನ್ನಣೆ ಗಳಿಸಲು ಯಶಸ್ವಿಯಾಗಿದೆ. ಸಾರ್ವಜನಿಕರು ಹೆಚ್ಚಿನ ಮಾಹಿತಿಯನ್ನು ಪಡೆಯಲು ಗ್ರಂಥಾಲಯದಿಂದ ಮಾತ್ರ ಸಾಧ್ಯವೆಂದು ಶ್ರೀಕೃಷ್ಣರಾಜೇಂದ್ರ ಗ್ರಂಥಾಲಯ ಜಿಲ್ಲಾ ಗ್ರಂಥಾಲಯಾಧಿಕಾರಿ ತಿಪ್ಪೇಸ್ವಾಮಿ ತಿಳಿಸಿದರು. ಅವರು, ಇಲ್ಲಿನ ಗ್ರಂಥಾಲಯದ ಕಚೇರಿಯಲ್ಲಿ ಗ್ರಂಥಸಹಾಯಕರಾಗಿ ಕಾರ್ಯನಿರ್ವಹಿಸಿದ ಗೌರಸಮುದ್ರದ ದಾಸಣ್ಣ, ಪಗಡಲಬಂಡೆ ರಾಜಣ್ಣ ಇವರ ನಿವೃತ್ತಿ ಬೀಳ್ಕೊಡಿಗೆ ಸಮಾರಂಭದಲ್ಲಿ ಪಾಲ್ಗೊಂಡು, ಸನ್ಮಾನಿಸಿ ಮಾತನಾಡಿದರು. ದಾಸಣ್ಣ ಮತ್ತು ರಾಜಣ್ಣ ತಮ್ಮ ಗ್ರಂಥಾಲಯಗಳಲ್ಲಿ ಸಮಯಕ್ಕೆ ಸರಿಯಾಗಿ ಆಗಮಿಸಿ ಉತ್ತಮ ಕೆಲಸ ಮಾಡಿದ್ದಾರೆ. ಗ್ರಾಮೀಣ ಭಾಗದಲ್ಲಿ ಹೆಚ್ಚು ಕೆಲಸದಿಂದ ಜನರ ಮನಸ್ಸನ್ನು ಗೆದ್ದಿದ್ದಾರೆ. ಯಾವುದೇ ಲೋಪವಿಲ್ಲದೆ, ಗ್ರಂಥಾಲಯ ಕಾರ್ಯದಲ್ಲಿ ತೊಡಗಿಕೊಂಡು ಸೇವೆ ಮಾಡಿದ್ದಾರೆ. ಇಂತಹ ಉತ್ತಮ ಗ್ರಂಥಸಹಾಯಕ ಸಂಖ್ಯೆ ಹೆಚ್ಚು ಬೆಳೆಯಲಿ ಎಂದರು. ತಾಪಂ ಗ್ರಂಥಾಲಯ ಸಂಘದ ಅಧ್ಯಕ್ಷ ದೊಣೆಹಳ್ಳಿತಿಪ್ಪೇಸ್ವಾಮಿ ಮಾತನಾಡಿ, ಗ್ರಂಥಾಲಯಗಳಲ್ಲಿ ಕಾರ್ಯನಿರ್ವಹಿಸುವ ಸಹಾಯಕ ಗ್ರಂಥಪಾಲಕರು ಇನ್ನೂ ಹೆಚ್ಚಿನ ಸೌಲಭ್ಯವನ್ನು ನೀಡಲು ಸರ್ಕಾರ ಮುಂದಾಗಬೇಕಿದೆ.



## ಪ್ರಮುಖ ಸುದ್ದಿ

# ನಾಡಿನೆಲ್ಲೆಡೆ ಬರೆದ ಛಾಯೆ ಮೂಡಿದ್ದರೂ ಸಹ, ಎಲ್ಲರ ಮೊಗದಲ್ಲಿ ಸಂತಸ ಮೂಡಿಸಲು ರಂಗಚಟುವಟಿಕೆಗಳು ನಡೆಯಬೇಕೆಂಬುದು ಶ್ರೀಗಳ ಆಶಯ

» ನಾಗತಿಹಳ್ಳಿಮಂಜುನಾಥ್





ಹೊಸದುರ್ಗ:ಇಡೀ ನಾಡಿನಲ್ಲೆ ಸಾಣೇಹಳ್ಳಿ ಎಂಬುದು ಸಾಂಸ್ಕೃತಿಕ ಕ್ಷೇತ್ರದ ತವರೂರು ನಾಟಕಗಳ ಸುಗ್ಗಿಯ ಬೀಡು ಸಾಹಿತ್ಯ ಸಾಂಸ್ಕೃತಿಕ ಕೆಲೆಗಳ ಬೀಡು ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವುದು ನಾಡಿನ ರಂಗಾಸಕ್ತರಿಗೆ ತಿಳಿದಿರುವಂತಹ ವಿಚಾರವೇ ಸರಿ.ಈ ಭಾರಿ ಸಾಣೇಹಳ್ಳಿಯಲ್ಲಿ ನವಂಬರ್ 2 ರಿಂದ 8 ರವರೆಗೆ

ನಡೆಯಲಿರುವ ರಾಷ್ಟ್ರೀಯ ನಾಟಕೋತ್ಸವದ ಈ ಬಾರಿ ವಿಶೇಷತೆಯೆಂದರೆ, ನಾಡಿನೆಲ್ಲೆಡೆ ಬರೆದ ಛಾಯೆ ಮೂಡಿದ್ದರೂ ಸಹ, ಎಲ್ಲರ ಮೊಗದಲ್ಲಿ ಸಂತಸ ಮೂಡಿಸಲು ರಂಗಚಟುವಟಿಕೆಗಳು ನಡೆಯಬೇಕು ಎಂಬದು ಸಾಣೇಹಳ್ಳಿಯ ಡಾ:ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮ್ಮಿಜಿಯವರ ಆಶಯವಾಗಿದೆ.

ಈವಿಚಾರವಾಗಿ ಕುರಿತಂತೆ ಶ್ರೀಮಠದಲ್ಲಿ ಮಾಧ್ಯಮದವರೊಂದಿಗೆ ನಾಟಕೋತ್ಸವದ ವಿವರಗಳನ್ನು ಹಂಚಿಕೊಂಡ ಶ್ರೀಗಳು ಜಗತ್ತಿನಲ್ಲಿ ನಡೆಯುತ್ತಿರುವ ಅನೇಕ ತಲ್ಲಣಗಳಿಂದಾಗಿ ಜನರು ಮನೋವಿಕಲತೆಗೆ ಒಳಗಾಗಿದ್ದಾರೆ. ಅವರಿಗೆ ಮಾನಸಿಕ ಸ್ಥೈರ್ಯ, ಭರವಸೆ ಮೂಡಿಸುವುದು, ಕಲೆ, ಸಾಹಿತ್ಯ ಮತ್ತು ಸಂಗೀತದಿಂದ. ಯುದ್ಧದಿಂದಾದ ರಕ್ತದ ಕಲೆ ಕಳೆದು ಎಲ್ಲರ ಮುಖದಲ್ಲಿ ತೇಜಸ್ಸು ನೀಡುವುದೇ ಈ ರಂಗಭೂಮಿ ಎಂದರು.

ಧ್ಯೇಯವಾಕ್ಯ:ಪ್ರತಿವರ್ಷ ನಾಟಕೋತ್ಸವ ಒಂದು ಧ್ಯೇಯವಾಕ್ಯವನ್ನು ಹೊಂದಿದ್ದು, ಅದಕ್ಕೆ ಪೂರಕವಾಗಿ ಕಾರ್ಯಕ್ರಮಗಳು ಜರುಗಲಿವೆ. ಈ ಬಾರಿ ಧ್ಯೇಯ ವಾಕ್ಯ 'ಗಗನದಿಂದ ಮೇಲೆ ಅನುಭಾವ ತಾನಿಲ್ಲ' ಎಂಬುದು. ಪೌರಾಣಿಕ, ವೈದಿಕ ಪರಂಪರೆ, ಪುರೋಹಿತ ಶಾಹಿ ವರ್ಗದವರು ಭೂತ ಹಾಗೂ ಭವಿಷ್ಯದ ಬಗ್ಗೆ ಜನರಿಗೆ ತಿಳಿಸಲು ಹೊರಟರು. ಆದರೆ ಶರಣರು ವರ್ತಮಾನದ ಮಾತು ಮತ್ತು ಅನುಭಾವ (ಆಂತರಿಕ ಭಾವನೆ) ಗೆ ಹೆಚ್ಚು ಒತ್ತು ನೀಡಿದರು. ಆಕಾಶದ ಮೇಲೆ, ಪಾತಾಳದ ಕೆಳಗಿದೆ ಎಂಬುದು ಏನೂ ಇಲ್ಲ, ವರ್ತಮಾನದ ಪೂರಕವಾಗಿ ನಾಟಕಗಳು ಜರುಗಲಿವೆ. ಅನುಭಾವ ಅಂತರಂಗದಲ್ಲಿನ ಜ್ಯೋತಿ, ಅದು ಜ್ಞಾನಕ್ಕೆ ಸಮಾನ, ಇದರ ಪರಿವಿಲ್ಲದವರು ಸ್ವರ್ಗ, ನರಕದ ಬಗ್ಗೆ ಮಾತನಾಡುವರು. ವರ್ತಮಾನಕ್ಕೆ ಪೂರಕವಾಗಿರಿ ಎಂಬುದೇ ಇದರ ಅರ್ಥ ಎಂದರು.

**ನವೆಂಬರ್ 2 ರಿಂದ 8 ರವರೆಗೆ ರಾಷ್ಟ್ರೀಯ ನಾಟಕೋತ್ಸವ:** ಹೊಸದುರ್ಗ ತಾಲೂಕಿನ ಸಾಣೇಹಳ್ಳಿಯಲ್ಲಿ ನ. 2 ರಿಂದ 8ರವರೆಗೆ ರಾಷ್ಟ್ರೀಯ ನಾಟಕೋತ್ಸವ ನಡೆಯಲಿದೆ ಪ್ರತಿವರ್ಷದಂತೆ ಈ ವರ್ಷವೂ ಶಿವಸಂಚಾರ–23 ರ ಮೂರು ನಾಟಕಗಳ ಜೊತೆಗೆ ಅನ್ಯ ಭಾಷೆಯ ನಾಟಕಗಳೂ ಸೇರಿದಂತೆ ಒಟ್ಟು 12 ನಾಟಕಗಳು ಪ್ರದರ್ಶನಗೊಳ್ಳುವವು. ರಾತ್ರಿ ನಡೆಯುವ ಏಳು ನಾಟಕಗಳು ಮುಖ್ಯ ವೇದಿಕೆಯಲ್ಲಿ ಮಧ್ಯಾಹ್ನ ನಡೆಯುವ ಐದು ನಾಟಕಗಳು ಎಸ್ ಎಸ್ ಒಳಾಂಗಣ ರಂಗಮಂದಿರದಲ್ಲಿ ನಡೆಯುವವು, ಒಂದು ದಿನ ಕಾಯಕ ಮತ್ತು ದಾಸೋಹ ತತ್ವಗಳ ಅಂತರ್ ಸಂಬಂದ ಕುರಿತಂತೆ ವಿಚಾರ ಸಂಕಿರಣವಿರುವುದು. ಇದರಲ್ಲಿ ವಿಷಯ ಚಿಂತಕರು ಹಾಗೂ ಶಿಕ್ಷಣ ಇಲಾಕೆಯ ಅಧಿಕಾರಿಗಳು ಭಾಗವಹಿಸುವರು. ಶಿವಸಂಚಾರದ ಬೆಳ್ಳಿ ಮಹೋತ್ಸವ ನಿಮಿತ್ತ ಸ್ಮರಣ ಸಂಚಿಕೆಯೂ ಸೇರಿದಂತೆ ಕೆಲ ಕೃತಿಗಳನ್ನು ಲೋಕಾರ್ಪಣೆಗೊಳಿಸಲಾಗುವುದು. ನಾಟಕೋತ್ಸವದಲ್ಲಿ ಪ್ರತಿವರ್ಷದಂತೆ ಧಾರ್ಮಿಕ ಮುಖಂಡರು, ರಾಜಕೀಯ ನೇತಾರರು, ಚಿಂತಕರು, ಕಲಾವಿದರು, ವಿಜ್ಞಾನಿಗಳು, ಮೊದಲಾದ ಗಣ್ಯರು, ಸಾಧಕರು ಭಾಗವಹಿಸುವರು.

ನಾಟಕೋತ್ಸವದ ಕೊನೆಯದಿನ ರಂಗಭೂಮಿಯಲ್ಲಿನ ಜೀವಮಾನದ ಸಾಧನೆಗಾಗಿ ಕೊಡಮಾಡುವ 'ಶ್ರೀ ಶಿವಕುಮಾರ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ನವೆಂಬರ್ ಒಂದನೆಯ ತಾರೀಖು ಆಸಕ್ತರಿಗೆ ಇಷ್ಟಲಿಂಗ ದೀಕ್ಷೆಯನ್ನು ನೀಡಲಾಗುವುದು. ನಾಟಕೋತ್ಸವದ ಆರಂಭದಿಂದ ಹಿಡಿದು ಮುಕ್ತಾಯದವರೆಗೆ ಕೃಷಿಗೆ ಸಂಬಂಧಿಸಿದಂತೆ ವಸ್ತು ಪ್ರದರ್ಶನವನ್ನು ಆಯೋಜಿಸಲಾಗುವುದು. ಪ್ರತಿವರ್ಷದಂತೆ ಪ್ರೇಕ್ಷಕರಿಗೆ ಪ್ರಸಾದದ ವ್ಯವಸ್ಥೆ ಇರುವುದು. ಖಾದಿ ಬಟ್ಟೆಗಳ ಮತ್ತು ಪುಸ್ತಕ ಮಳಿಗೆಗಳು ಇರುವವು. ಮಳೆ ಬಂದರೆ, ದಟ್ಟಣೆಯುಂಟಾಗದಂತೆ ಬೃಹತ್ ಎಲ್ ಇ ಡಿ ಪರದೆಗಳ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ತಿಳಿಸಿದರು. ಪ್ರತಿದಿನ ಬೆಳಗ್ಗೆ ನಡೆಯುವ ಪ್ರಾರ್ಥನಾ ಸಭೆಯಲ್ಲಿ ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಸಂಬಂಧಸಿದಂತೆ ವಿಷಯಗಳನ್ನು ಸಂಯೋಜಿಸಲಾಗುವುದು. ಇದರಲ್ಲಿ ಸುತ್ತಮುತ್ತಲಿನ ಶಾಲೆಯ ಮಕ್ಕಳಿಗೂ ಭಾಗವಹಿಸಲುಅವಕಾಶಕಲ್ಪಿಸಲಾಗುವುದು. ನಾಟಕೋತ್ಸವವನ್ನು ಯಶಸ್ವಿಗೊಳಿಸಲು ಸ್ವಾಗತಿ ಸಮಿತಿ, ಸ್ವಚ್ಚತಾ ಸಮಿತಿ, ಪ್ರಸಾದ ಸಮಿತಿ,ಪ್ರಚಾರ ಸಮಿತಿ ಮೊದಲಾದ ಸಮಿತಿಗಳನ್ನು ರಚಿಸಲಾಗಿದೆ ಎಂದು ಶ್ರೀಗಳು ತಿಳಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T